ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೫

**ಪಟ್ಟಿ – ೨೧**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೇಳನೇ ಅಧಿವೇಶನ

ಮುಂದುವರೆದ ಉಪವೇಶನ

**ಮಂಗಳವಾರ, ದಿನಾಂಕ : ೩೧ನೇ ಮಾರ್ಚ್, ೨೦೧೫**

---

## ಸಮೂಹ – II

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

---

F-1 - B/B

## ತುರುವೇಕೆರೆ ತಾಲ್ಲೂಕು ಹನಿ ನೀರಾವರಿ ಯೋಜನೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೨೬೬೪ (೩೦೨೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹನಿ ನೀರಾವರಿ ಯೋಜನೆ ಒದಗಿಸಲು ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ತುರುವೇಕೆರೆ ತಾಲ್ಲೂಕಿನಲ್ಲಿ ಕಳೆದ ಎರಡು ವರ್ಷಗಳಿಂದ ರೈತರಿಂದ ಹನಿ ನೀರಾವರಿ ಯೋಜನೆಗೆ ಬಂದಿರುವ ಬೇಡಿಕೆಗಳೆಷ್ಟು ;

(ಇ) ರೈತರು ಬೇಡಿಕೆ ಸಲ್ಲಿಸಿರುವ ಜಮೀನುಗಳ ಸರ್ವೆ ನಂಬರ್, ಗ್ರಾಮ ಹಾಗೂ ಎಷ್ಟು ಎಕರೆಗೆ ಬೇಡಿಕೆ ಸಲ್ಲಿಸಿರುತ್ತಾರೆ ; (ವಿಳಾಸ ಸಮೇತ ವಿವರ ನೀಡುವುದು)

(ಈ) ಈ ವರ್ಷದಲ್ಲಿ ಹನಿ ನೀರಾವರಿಗೆ ರೈತರಿಂದ ಅರ್ಜಿ ತೆಗೆದುಕೊಳ್ಳದಿರಲು ಕಾರಣವೇನು ;

(ಉ) ಬೇಡಿಕೆ ಬಂದಿರುವ ಎಲ್ಲಾ ರೈತರಿಗೆ ಎಷ್ಟು ಸಮಯದಲ್ಲಿ ಪೂರೈಸಲಾಗುವುದು ;

(ಊ) ತುರುವೇಕೆರೆ ತಾಲ್ಲೂಕಿನಲ್ಲಿ ಹನಿ ನೀರಾವರಿ ಒದಗಿಸಲು ಸರ್ಕಾರದಿಂದ ಅನುಮೋದಿಸಿರುವ ಸಂಸ್ಥೆಗಳು ಅಥವಾ ಗುತ್ತಿಗೆದಾರರು ಯಾರು ಯಾರು ? (ಹೆಸರು, ವಿಳಾಸ, ದೂರವಾಣಿಯೊಂದಿಗೆ ಪೂರ್ಣ ಮಾಹಿತಿ ಒದಗಿಸುವುದು)

## ತುಂಡು ಗುತ್ತಿಗೆಯ ಕಾಮಗಾರಿಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೬೬೫ (೩೦೨೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯಲ್ಲಿ ಕಳೆದ ಎರಡು ವರ್ಷದಿಂದ ಎಷ್ಟು ತುಂಡು ಗುತ್ತಿಗೆಯ ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ ;

(ಆ) ಸದರಿ ಕಾಮಗಾರಿಗಳ ಮೊತ್ತವೆಷ್ಟು ; ಯಾವ ಯಾವ ತಾಲ್ಲೂಕಿನಲ್ಲಿ ಯಾವ ಗುತ್ತಿಗೆದಾರರು ಕೆಲಸ ಮಾಡಿರುತ್ತಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಕಾಮಗಾರಿಗಳಿಗೆ ಅನುಮೋದನೆ ನೀಡುವಲ್ಲಿ ಅನುಸರಿಸಿರುವ ಮಾನದಂಡವೇನು ;

(ಈ) ಮುಖ್ಯಮಂತ್ರಿಗಳು ಆದೇಶ ಮಾಡಿದ್ದರೂ ಅದನ್ನು ಧಿಕ್ಕರಿಸಿ ಕಾಮಗಾರಿ ತೆಗೆದುಕೊಳ್ಳದಿರಲು ಕಾರಣವೇನು ?

## ತುಮಕೂರು ಜಿಲ್ಲೆಯ ಹಾಲು ಉತ್ಪಾದಕರ ಸಂಘಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೬೬೬ (೩೦೨೮) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲೆಯಲ್ಲಿರುವ ಎಲ್ಲಾ ತಾಲ್ಲೂಕು ಗ್ರಾಮಗಳಲ್ಲಿರುವ ಹಾಲು ಉತ್ಪಾದಕರ ಸಂಘಗಳು ಎಷ್ಟು ; ಅವು ಯಾವುವು ; (ವಿಳಾಸ ಸಮೇತ ವಿವರ ನೀಡುವುದು)

(ಆ) ಸರ್ಕಾರದಿಂದ ಪ್ರತಿ ಲೀಟರ್ ಹಾಲಿಗೆ ಕೊಡುತ್ತಿರುವ ಸಹಾಯ ಧನವೆಷ್ಟು; ಸರ್ಕಾರ ನೀಡುತ್ತಿರುವ ಸಬ್ಸಿಡಿ ಸಹಾಯಧನ ಸಂಪೂರ್ಣವಾಗಿ ಎಲ್ಲಾ ಹಾಲು ಉತ್ಪಾದಕರಿಗೆ ತಲುಪಿಸಲಾಗುತ್ತಿದೆಯೇ ;

(ಇ) ಈ ಸಾಲಿನಿಂದ ಹಾಲು ಉತ್ಪಾದಕರಿಗೆ ಅನುಕೂಲವಾಗಲು ಹೆಚ್ಚುವರಿಯಾಗಿ ೨ ರೂ.ಗಳ ಜಾಸ್ತಿ ಮಾಡಲಾಗುವುದೆ ?

## ರಾಜ್ಯದಲ್ಲಿ ಗೇರು ಕೃಷಿ ನೀತಿ ರಚನೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೬೬೭ (೩೦೩೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗೇರು 'ಕೃಷಿ ನೀತಿ' ಯನ್ನು ರಚಿಸಲಾಗುವುದೇ ; ರಾಜ್ಯದಲ್ಲಿ ಎಷ್ಟು ಹೆಕ್ಟೇರ್ ಸ್ಥಳದಲ್ಲಿ ಗೇರು ಕೃಷಿಯನ್ನು ಮಾಡಲಾಗುತ್ತದೆ ; ಮತ್ತು ಎಷ್ಟು ಟನ್ ಗೇರು ಬೀಜ ಉತ್ಪಾದಿಸಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು.)

(ಆ) ರಾಜ್ಯದಲ್ಲಿ ಗೇರು ಸಂಸ್ಕರಣೆಗೆ ಸಂಬಂಧಪಟ್ಟ ಕಾರ್ಖಾನೆಗಳೆಷ್ಟು ; ಮತ್ತು ಇದರಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು ;

(ಇ) ಗೇರು ಕೃಷಿಯನ್ನು ಪ್ರೋತ್ಸಾಹಿಸಲು ಇಲಾಖೆ ಕೈಗೊಂಡ ಕಾರ್ಯಕ್ರಮಗಳಾವುವು ; ವೈಜ್ಞಾನಿಕ ಗೇರು ಸಸಿಗಳನ್ನು ರೈತರಿಗೆ ನೀಡಲಾಗಿದೆಯೇ ;

(ಈ) ರಾಜ್ಯದಲ್ಲಿ ಬೇಡಿಕೆ ಇರುವಷ್ಟು ಗೇರು ಫಸಲ್‌ನ್ನು ಬೆಳೆಸಲು ಸಾಧ್ಯವಾಗುತ್ತಿಲ್ಲ ಎಂಬ ವಿಚಾರ ಇಲಾಖೆ ಗಮನಕ್ಕೆ ಬಂದಿದೆಯೇ ; ಇಲಾಖೆ ಕೈಗೊಂಡ ಕ್ರಮಗಳೇನು ?

## ಲೋಕೋಪಯೋಗಿ ಇಲಾಖೆಗೆ ಒಳಪಟ್ಟ ಸರ್ಕಿಟ್ ಹೌಸ್/ಅತಿಥಿ ಗೃಹಗಳು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೬೬೮ (೩೦೩೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಗೆ ಒಳಪಟ್ಟ ಸರ್ಕಿಟ್ ಹೌಸ್‌ಗಳ/ಅತಿಥಿ ಗೃಹಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು ;

(ಆ) ಸರ್ಕಿಟ್ ಹೌಸ್/ಅತಿಥಿ ಗೃಹಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೆಲಸಗಾರರು ಖಾಯಂ ಉದ್ಯೋಗಿಗಳೇ ; ಇಲ್ಲದಿದ್ದಲ್ಲಿ ಎಷ್ಟು ಕಾರ್ಮಿಕರು, ಎಷ್ಟು ವರ್ಷದಿಂದ ಕೆಲಸ ನಿರ್ವಹಿಸುತ್ತಿದ್ದಾರೆ ;

(ಇ) ಸರ್ಕಿಟ್, ಹೌಸ್/ಅತಿಥಿ ಗೃಹಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉದ್ಯೋಗಿಗಳಿಗೆ ತಿಂಗಳೊಂದಕ್ಕೆ ನೀಡುವ ಸಂಬಳ ಎಷ್ಟು; ಕೆಲಸದ ಅವಧಿ ಎಷ್ಟು ;

(ಈ) ಸರ್ಕಿಟ್ ಹೌಸ್/ಅತಿಥಿ ಗೃಹಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಖಾಯಂ ಗೊಳಿಸಲು ಇಲಾಖೆ ಕ್ರಮ ಕೈಗೊಳ್ಳುವುದೆ ; ಈ ಬಗ್ಗೆ ಕೈಗೊಂಡ ಕ್ರಮಗಳೇನು ?

## ಪ್ರಯೋಗಾಲಯ ಹಾಗೂ ಸಂಶೋಧನಾ ಕೇಂದ್ರಗಳು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೬೬೯ (೩೦೩೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಎಕರೆ ಭೂಮಿಯಲ್ಲಿ ತೋಟಗಾರಿಕಾ ಬೆಳೆಗಳನ್ನು ಬೆಳೆಸಲಾಗುತ್ತಿದೆ; ಅದರಲ್ಲಿ ಬೆಳೆಸುವ ಬೆಳೆಗಳಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ತೋಟಗಾರಿಕೆ ಬೆಳೆಗಳನ್ನು ಬೆಳೆಸಲು ಮತ್ತು ಕೀಟನಾಶಗಳ ಪರಿವೀಕ್ಷಣೆಗೆ ಎಷ್ಟು ಪ್ರಯೋಗಾಲಯಗಳು ಮತ್ತು ಸಂಶೋಧನಾ ಕೇಂದ್ರಗಳಿವೆ; ಇದ್ದರೆ, ವಿವರ ನೀಡುವುದು; ಇಲ್ಲದಿದ್ದಲ್ಲಿ, ಕಾರಣವೇನು ;

(ಇ) ತೋಟಗಾರಿಕೆ ಕೃಷಿಯ ಬಗ್ಗೆ ಮಾಹಿತಿ ನೀಡುವ ಅಧಿಕಾರಿಗಳ ಸಂಖ್ಯೆ ಎಷ್ಟು ; ಕಡಿಮೆ ಇರುವುದರ ಬಗ್ಗೆ ಇಲಾಖೆಯ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ವಿವರ ನೀಡುವುದು ;

(ಈ) ನಗರದಲ್ಲಿ ತಾರಸಿ ಕೃಷಿಯುನ್ನು ಎಷ್ಟು ಪ್ರದೇಶಗಳಲ್ಲಿ ಬೆಳೆಸಲಾಗುತ್ತಿದೆ; ಮತ್ತು ಇವರಿಗೆ ನೀಡುವ ಪ್ರೋತ್ಸಾಹ ಧನ ಎಷ್ಟು ?

## ಕೃಷಿ ಯಂತ್ರೋಪಕರಣ ಬಾಡಿಗೆ ನೀಡುವ ಯೋಜನೆಗಳು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೨೬೭೦ (೩೦೩೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೃಷಿ ಯಂತ್ರೋಪಕರಣ ಬಾಡಿಗೆ ನೀಡುವ ಯೋಜನೆಯಲ್ಲಿ ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯ ಯಾವ ಯಾವ ಹೋಬಳಿಗಳಲ್ಲಿ ಕೇಂದ್ರ ತೆರೆಯಲು ಕ್ರಮ ಕೈಗೊಳ್ಳಲಾಗಿದೆ ;

(ಆ) ಪ್ರಸ್ತುತ ಮಂಗಳೂರು ತಾಲ್ಲೂಕು ವಾಮದ ಪದವಿನಲ್ಲಿರುವ ಕೃಷಿ ಯಂತ್ರೋಪಕರಣಗಳನ್ನು ಎಷ್ಟು ರೈತರು ಬಾಡಿಗೆ ಪಡೆದುಕೊಂಡಿದ್ದಾರೆ ;

(ಇ) ಕೃಷಿ ಭಾಗ್ಯ ಯೋಜನೆಗೆ ದಕ್ಷಿಣ ಕನ್ನಡ ಜಿಲ್ಲೆಗೆ ಮೀಸಲಿಟ್ಟ ಅನುದಾನ ಎಷ್ಟು ; (ವಿವರ ನೀಡುವುದು)

(ಈ) ಕೃಷಿ ಭಾಗ್ಯ ಯೋಜನೆಯಿಂದ ಯಾವ ಯಾವ ಪ್ರಯೋಜನಗಳು ದೊರೆಯಲಿದೆ ? (ಸಂಪೂರ್ಣ ವಿವರ ನೀಡುವುದು)

## ಭತ್ತದ ಕೃಷಿಯನ್ನು ಪ್ರೋತ್ಸಾಹಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೬೭೧ (೩೦೪೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರಾವಳಿ ಜಿಲ್ಲೆಗಳಲ್ಲಿ ಭತ್ತ ಕೃಷಿಯನ್ನು ಪ್ರೋತ್ಸಾಹಿಸಲು ಇಲಾಖೆ ತೆಗೆದುಕೊಂಡ ಕಾರ್ಯಕ್ರಮಗಳು ಯಾವುವು ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಕೃಷಿ ಸಹಾಯಕರ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ; ಪ್ರತಿ ಗ್ರಾಮಕ್ಕೆ ಒಂದರಂತೆ ಕೃಷಿ ಸಹಾಯಕರನ್ನು ನೇಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಂಪೂರ್ಣ ಕೃಷಿಯನ್ನು ಜೀವನಾಧಾರವಾಗಿ ಅವಲಂಬಿಸಿದ ಕುಟುಂಬಗಳೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

(ಈ) ಕರಾವಳಿಯ ೩ ಜಿಲ್ಲೆಗಳಲ್ಲಿ ಎಷ್ಟು ಹೆಕ್ಟೇರ್‌ಗಳಲ್ಲಿ ಭತ್ತದ ಕೃಷಿಯನ್ನು ಬೆಳೆಸಲಾಗುತ್ತಿದೆ ; ಜಿಲ್ಲಾವಾರು ವಿವರ ನೀಡುವುದು ;

(ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರೈತರು ಕೃಷಿಯಿಂದ ದೂರ ಸರಿಯುತ್ತಿರುವುದು ಸರ್ಕಾರ ಗಮನಿಸಿದೆಯೇ ; ಕೃಷಿಗೆ ಅಗತ್ಯವಾದ ಮೂಲಭೂತ ಅವಶ್ಯಕತೆಗಳನ್ನು ಕಲ್ಪಿಸಲು ಇಲಾಖೆ ಕೈಗೊಂಡ ಕಾರ್ಯಕ್ರಮಗಳೇನು ?

## ಸಹಕಾರ ಸಂಘಗಳಲ್ಲಿ ಸ್ಥಳೀಯ ಸಂಸ್ಥೆ ಮಾದರಿ ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ನೇಮಕಾತಿಯಲ್ಲಿ ಮೀಸಲು ಅಳವಡಿಸುವ ಬಗ್ಗೆ

**ಶ್ರೀ ಬಿ.ಜಿ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೭೨ (೩೦೪೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತಾಲ್ಲೂಕು, ಜಿಲ್ಲಾ ಮಟ್ಟದಲ್ಲಿ ಸಹಕಾರ ಸಂಘಗಳ ಆಡಳಿತ ಮಂಡಳಿಗೆ ಸ್ಥಳೀಯ ಸಂಸ್ಥೆ ಮಾದರಿ ಮೀಸಲಾತಿಯನ್ನು ಹಿಂದುಳಿದ ವರ್ಗಗಳಿಗೆ ಅಳವಡಿಸಿರುವುದು ನಿಜವೇ ;

(ಆ) ಹಾಗಿದ್ದರೆ, ಈ ಮೀಸಲಾತಿಯನ್ನು ಸಹಕಾರ ಮಂಡಳಿ, ಮಹಾಮಂಡಳಿ ಮತ್ತು ಅಪೆಕ್ಸ್ ಬ್ಯಾಂಕುಗಳಿಗೆ ವಿಸ್ತರಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ ;

(ಇ) ಸಹಕಾರ ಸಂಘಗಳ ಮತ್ತು ಮಹಾಮಂಡಳಿಗಳು ಹಾಗೂ ಅಪೆಕ್ಸ್ ಬ್ಯಾಂಕ್ ಸಂಸ್ಥೆಗಳ ಆಡಳಿತ ಮಂಡಳಿಯಲ್ಲಿ ಸ್ಥಳೀಯ ಸಂಸ್ಥೆಗಳ ಮೀಸಲಾತಿ ಮಾದರಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಮೀಸಲಾತಿಯನ್ನು ಹಿಂದುಳಿದ ವರ್ಗಗಳು ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗಗಳು ಮತ್ತು ಮಹಿಳೆಯರಿಗೆ ನೀಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ ; ಮಾಹಿತಿ ನೀಡುವುದು ?

## ರಾಜ್ಯದ ಗ್ರಾಮಾಂತರ ಪ್ರದೇಶದ ರೈತರ ಮಕ್ಕಳಿಗೆ ಸಿಗುವ ಸೌಲಭ್ಯಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೭೩ (೩೦೩೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮಾಂತರ ಪ್ರದೇಶದಲ್ಲಿ ವಾಸ್ತವ್ಯವಿರುವ ರೈತರ ಮಕ್ಕಳಿಗೆ ಶಿಕ್ಷಣದಲ್ಲಿ ಮತ್ತು ಉದ್ಯೋಗದಲ್ಲಿ ಇರತಕ್ಕಂತಹ ಸೌಲಭ್ಯಗಳು ಯಾವುವು ;

(ಆ) ಗ್ರಾಮಾಂತರ ಪ್ರದೇಶದಲ್ಲಿ ವಾಸ್ತವ್ಯವಿದ್ದು, ವಿದ್ಯಾರ್ಜನೆಗಾಗಿ ದಿನನಿತ್ಯ ನಗರ ಪ್ರದೇಶಕ್ಕೆ ಪ್ರಯಾಣಿಸುತ್ತಿರುವ ರೈತರ ಮಕ್ಕಳು ಗ್ರಾಮೀಣ ಸೌಲಭ್ಯಗಳಿಂದ ವಂಚಿತರಾಗುತ್ತಿರುವ ಅರಿವು ಸರ್ಕಾರಕ್ಕಿದೆಯೇ ; ಇದ್ದಲ್ಲಿ, ಇದನ್ನು ಸರಿಪಡಿಸಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ?

## ಶಿರಾಡಿಘಾಟ್‌ನಲ್ಲಿ ವಾಹನ ಸಂಚಾರ ನಿರ್ಬಂಧದಿಂದ ರಾಜ್ಯ ರಸ್ತೆಗಳು ಹದಗೆಡುತ್ತಿರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೭೪ (೩೦೩೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿರಾಡಿ ಘಾಟ್‌ನ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಾಗಿ ಸಂಚಾರವನ್ನು ನಿರ್ಬಂಧಿಸಿರುವುದರಿಂದ ಅಧಿಕ ಭಾರದ ಘನ ವಾಹನಗಳು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ರಾಜ್ಯ ರಸ್ತೆಗಳಲ್ಲಿ ಸಂಚರಿಸುತ್ತಿರುವುದರಿಂದ ಮುಂದಿನ ಮಳೆಗಾಲದಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ರಾಜ್ಯ ರಸ್ತೆಗಳಲ್ಲಿ ವಾಹನ ಸಂಚಾರ ದುಸ್ತರವಾಗುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ತುರ್ತು ಕ್ರಮಗಳೇನು ;

(ಆ) ಅಧಿಕ ಭಾರದ ಘನ ವಾಹನಗಳ ಸಂಚಾರದಿಂದ ಹಾಳಾಗುತ್ತಿರುವ ರಸ್ತೆಗಳ ದುರಸ್ಥಿಗೆ ವಿಶೇಷ ಅನುದಾನವನ್ನು ಒದಗಿಸಲಾಗುವುದೇ ; ಇಲ್ಲಾವಾದಲ್ಲಿ, ಕಾರಣವೇನು ?

## ರಾಜ್ಯದಲ್ಲಿರುವ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೭೫ (೩೦೩೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳ ಸಂಖ್ಯೆ ಎಷ್ಟು ; ಮತ್ತು ಯಾವುವು ಮತ್ತು ಜಿಲ್ಲಾ ಕೇಂದ್ರ ಸಹಕಾರಿ

ಬ್ಯಾಂಕುಗಳ ಶಾಖೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಬ್ಯಾಂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿನ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಬ್ಯಾಂಕುವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳು ನೂತನವಾಗಿ ಎಷ್ಟು ಶಾಖೆಗಳನ್ನು ತೆರೆಯುವ ಯೋಜನೆಯನ್ನು ಹೊಂದಿವೆ ? (ಬ್ಯಾಂಕ್‌ವಾರು ವಿವರ ನೀಡುವುದು)

## ರಾಜ್ಯದಲ್ಲಿನ ಬೆಂಗಳೂರು, ಧಾರವಾಡ, ರಾಯಚೂರು, ಶಿವಮೊಗ್ಗ ಮತ್ತು ಬಾಗಲಕೋಟೆ ಕೃಷಿ ವಿ.ವಿ.ಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೭೬ (೩೦೩೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಬೆಂಗಳೂರು, ಧಾರವಾಡ, ರಾಯಚೂರು, ಶಿವಮೊಗ್ಗ ಮತ್ತು ಬಾಗಲಕೋಟೆ ಕೃಷಿ ವಿಶ್ವ ವಿದ್ಯಾನಿಲಯಗಳಲ್ಲಿ ಬೇರೆ, ಬೇರೆ ವಿಷಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ; (ವಿಶ್ವವಿದ್ಯಾನಿಲಯಗಳವಾರು, ಪ್ರತ್ಯೇಕ ವಿವರ ನೀಡುವುದು)

(ಆ) ಈ ಮೇಲಿನ ಕೃಷಿ ವಿಶ್ವವಿದ್ಯಾನಿಲಯಗಳು ಹೊಂದಿರುವ ಒಟ್ಟು ಭೂಮಿಯ ವಿಸ್ತೀರ್ಣವೆಷ್ಟು; ಮತ್ತು ಅವುಗಳಲ್ಲಿ ಕೃಷಿ ಮಾಡುತ್ತಿರುವಂತಹ ಒಟ್ಟು ಭೂಮಿಯ ವಿಸ್ತೀರ್ಣವೆಷ್ಟು ; (ವಿಶ್ವವಿದ್ಯಾನಿಲಯಗಳವಾರು, ಪ್ರತ್ಯೇಕ ವಿವರ ನೀಡುವುದು)

(ಇ) ರಾಜ್ಯದ ಕೃಷಿ ವಿಶ್ವವಿದ್ಯಾನಿಲಯಗಳಲ್ಲಿ ಅಭ್ಯಸಿಸುತ್ತಿರುವ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಕೃಷಿಯನ್ನು ಲಾಭದಾಯಕ ಮಾಡುವುದರಲ್ಲಿ ಪರಿಣಿತಿ ಹೊಂದಲು ಕೃಷಿಯಲ್ಲಿ ತಾಂತ್ರಿಕತೆಯು ಬಗ್ಗೆ ಕಾರ್ಯಕ್ರಮವನ್ನು ರೂಪಿಸಲಾಗುವುದೇ ?

## ರಾಜ್ಯದ ರೈತರಿಗೆ ರಸಗೊಬ್ಬರ ಸರಬರಾಜು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೬೭೭ (೩೦೩೫) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರೈತರಿಗೆ ಒಟ್ಟು ಎಷ್ಟು ಪ್ರಮಾಣದಲ್ಲಿ ರಸಗೊಬ್ಬರದ ಬೇಡಿಕೆ ಇದೆ ; (ವಿವಿಧ ಗೊಬ್ಬರದ ವಿವರ ನೀಡುವುದು)

(ಆ) ರಾಜ್ಯದ ರೈತರಿಗೆ ಬೇಕಾಗುವಷ್ಟು ರಸಗೊಬ್ಬರವನ್ನು ಸರಬರಾಜು ಮಾಡಲಾಗುತ್ತಿದೆಯೇ ;

(ಇ) ಇಲ್ಲವಾದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಎಂಡೋಸಲ್ಫಾನ್ ಸಂತ್ರಸ್ತರಿಗೆ ಮಾಸಾಶನ ಮತ್ತು ಪರಿಹಾರ ನೀಡುವ ಬಗ್ಗೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೬೭೮ (೩೦೨೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎಂಡೋಸಲ್ಫಾನ್ ಸಂತ್ರಸ್ತರಿಗೆ ಪ್ರತಿ ತಿಂಗಳು ಮಾಸಾಶನ ಸರಿಯಾಗಿ ವಿತರಣೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಲವಾರು ಸಂತ್ರಸ್ತರಿಗೆ ೩ ತಿಂಗಳಿಗೊಮ್ಮೆ ಮಾಸಾಶನ ವಿತರಣೆಯಾಗುತ್ತಿರುವುದರಿಂದ ಎಂಡೋಸಲ್ಫಾನ್ ಸಂತ್ರಸ್ತರು ತೀರ ದುಸ್ಥಿತಿಯಲ್ಲಿ ಜೀವನ ನಿರ್ವಹಣೆ ಮಾಡಬೇಕಾಗಿರುವುದರಿಂದ ಪ್ರತಿ ತಿಂಗಳು ಸರಿಯಾಗಿ ಪರಿಹಾರ ವಿತರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ೨೦೧೩-೧೪ ಹಾಗೂ ೨೦೧೪-೧೫ರ ಸಾಲಿನಲ್ಲಿ ಎಂಡೋಸಲ್ಫಾನ್ ಸಂತ್ರಸ್ತರಿಗೆ ಎಷ್ಟು ಪರಿಹಾರ ವಿತರಿಸಲಾಗಿದೆ ; ಜಿಲ್ಲಾವಾರು ವಿವರ ನೀಡುವುದು ?

## ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸುವುದು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೨೬೭೯ (೩೦೭೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಹೆದ್ದಾರಿಗಳ ಸಂಖ್ಯೆ ಎಷ್ಟು ; ಅದರ ವಿಸ್ತೀರ್ಣ (ಕಿ.ಮೀ.) ಎಷ್ಟು ;

(ಆ) ಈ ಹೆದ್ದಾರಿಗಳಲ್ಲಿ ಎಷ್ಟು ರಸ್ತೆಗಳಿಗೆ ಟೋಲ್ ನಾಕಾಗಳಿವೆ ;

(ಇ) ಈ ಟೋಲ್ ನಾಕಾಗಳಿಂದ ಸರ್ಕಾರಕ್ಕೆ ವಾರ್ಷಿಕವಾಗಿ ಬರುವ ಆದಾಯವೆಷ್ಟು ;

(ಈ) ಈಗಿರುವ ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸುವ ಯೋಜನೆ ಸರ್ಕಾರಕ್ಕೆ ಇದೆಯೇ ;

(ಉ) ಇದ್ದಲ್ಲಿ, ರಾಜ್ಯದ ಯಾವ ಯಾವ ಹೆದ್ದಾರಿಗಳನ್ನು ಪರಿವರ್ತಿಸಲಾಗುವುದು ?

# ರಾಜ್ಯದಲ್ಲಿರುವ ಹಾಪ್‌ಕಾಮ್ಸ್ ಮಳಿಗೆಗಳಲ್ಲಿನ ವಹಿವಾಟು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೨೬೮೦ (೩೦೭೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಹಾಪ್‌ಕಾಮ್ಸ್ ಮಳಿಗೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಮಳಿಗೆಗಳು ೨೦೧೩-೧೪, ೨೦೧೪-೧೫ನೇ ಸಾಲಿನಲ್ಲಿ ಮಾಡಿದ ವಹಿವಾಟು ಎಷ್ಟು ;

(ಇ) ಹಾಪ್‌ಕಾಮ್ಸ್ ಮಳಿಗೆಗಳು ರೈತರಿಂದ ಹಣ್ಣು-ತರಕಾರಿಗಳನ್ನು ಖರೀದಿಸಲು ಇರುವ ಮಾನದಂಡಗಳೇನು ;

(ಈ) ಈ ಮಾನದಂಡಗಳ ಪ್ರಕಾರ ಖರೀದಿ ಮಾಡದೇ ಖಾಸಗಿ ವ್ಯಾಪಾರಿಗಳಿಂದ ಹಣ್ಣು-ತರಕಾರಿಗಳನ್ನು ಖರೀದಿ ಮಾಡಿ ರೈತರಿಗೆ ಮೋಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಪ್‌ಕಾಮ್ಸ್ ಸಂಸ್ಥೆಯು ಲಾಭ-ನಷ್ಟವಿಲ್ಲದ ಆಧಾರದ ಮೇಲೆ ವ್ಯವಹರಿಸಬೇಕಾಗಿದ್ದು, ಅದರ ಬದಲಾಗಿ ಮಾರುಕಟ್ಟೆಯಲ್ಲಿ ಸಿಗುವ ಹಣ್ಣು-ತರಕಾರಿಗಳ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ತೆಗೆದುಕೊಂಡ ಕ್ರಮಗಳೇನು ;

(ಋ) ಈ ಹಾಪ್‌ಕಾಮ್ಸ್ ಮಳಿಗೆಯ ವ್ಯಾಪ್ತಿಯನ್ನು ವಿಸ್ತರಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ಹೊರ ಗುತ್ತಿಗೆ ನೌಕರರಿಗೆ ಕನಿಷ್ಠ ವೇತನ ಪಾವತಿಸುವ ಬಗ್ಗೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೨೬೮೧ (೩೦೭೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ನೌಕರರನ್ನು ಒದಗಿಸಲು ಪ್ರತಿ ವರ್ಷ ಟೆಂಡರ್ ಕರೆಯುವುದು ಕಡ್ಡಾಯವೇ ;

(ಆ) ಪಟ್ಟಣ ಪಂಚಾಯ್ತಿಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರುಗಳಿಗೆ ಕಾರ್ಮಿಕ ಇಲಾಖೆಯಿಂದ ನಿಗಧಿಪಡಿಸಿರುವ ಕನಿಷ್ಠ ವೇತನ ಪಾವತಿಸಲಾಗುತ್ತಿದೆಯೇ ;

(ಇ) ಹಳೆಯ ದರದಂತೆ ವೇತನ ಪಾವತಿಸಿ ಕಾರ್ಮಿಕರಿಗೆ ಅನ್ಯಾಯ ಎಸಗುತ್ತಿರುವ ಪ್ರಕರಣಗಳು ಕಂಡು ಬಂದಿದ್ದರೆ ಇದಕ್ಕೆ ಯಾರು ಹೊಣೆಗಾರರು ಮತ್ತು ಅಂತಹವರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗುವುದು ?

## ಕೇಂದ್ರ ಸರ್ಕಾರದ ಬಜೆಟ್‌ನಿಂದ ರಾಜ್ಯದ ಕೃಷಿ ಬಜೆಟ್‌ದಲ್ಲಿ ಖೋತಾ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೨೬೮೨ (೩೦೪೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರ ಮಂಡಿಸಿದ ಬಜೆಟ್‌ದಿಂದ ಕೃಷಿ ವಲಯಕ್ಕೆ ಹಣ ಖೋತಾ ಆಗುವ ಸಂಗತಿ ನಿಜವೇ; ಹಾಗಿದ್ದಲ್ಲಿ, ಎಷ್ಟು ಹಣ ಖೋತಾ ಆಗುವುದು ;

(ಆ) ಕೃಷಿ ವಿಕಾಸ ಯೋಜನೆಗೆ ಕಳೆದ ವರ್ಷ ಎಷ್ಟು ಕೋಟಿ ರೂ.ಗಳ ಕಾರ್ಯಕ್ರಮ ರೂಪಿಸಿಕೊಂಡಿತ್ತು ; ಹಾಗೂ ಇಲ್ಲಿಯವರೆಗೆ ಹಣ ಖರ್ಚಾಗಿರುವುದು ಎಷ್ಟು, ಕೇಂದ್ರದಿಂದ ಬಂದಿರುವ ಹಣ ಎಷ್ಟು ; ಹಾಗೂ ಇನ್ನೂ ಎಷ್ಟು ಹಣ ಬರಬೇಕಾಗಿದೆ ;

(ಇ) ಅತೀ ಸೂಕ್ಷ್ಮ ನೀರಾವರಿ ಯೋಜನೆ ಅಡಿ ಕೇಂದ್ರ ಸರ್ಕಾರದಿಂದ ಶೇಕಡಾ ೫೦ ರಷ್ಟು ಪ್ರೋತ್ಸಾಹ ಧನ ದೊರೆಯುತ್ತಿದ್ದು, ಈ ಯೋಜನೆ ಅಡಿಯಲ್ಲಿ ರಾಜ್ಯಕ್ಕೆ ಎಷ್ಟು ಹಣ ಬಂದಿರುವುದು ಹಾಗೂ ಎಷ್ಟು ಹಣ ರಾಜ್ಯ ಸರ್ಕಾರ ಖರ್ಚು ಮಾಡಿರುವುದು ;

(ಈ) ಈಗ ಕೇಂದ್ರ ಸರ್ಕಾರವು ಈ ಪ್ರಮಾಣವನ್ನು ಶೇಕಡಾ ೩೦ಕ್ಕೆ ಇಳಿಸಿರುವುದು ನಿಜವೇ ;

(ಉ) ಜಲಾನಯನ ಅಭಿವೃದ್ಧಿ ಯೋಜನೆಯಡಿ ರಾಜ್ಯ ಸರ್ಕಾರ ಕಳೆದ ವರ್ಷ ಹಾಗೂ ಈ ವರ್ಷ ಎಷ್ಟು ಹಣ ಖರ್ಚು ಮಾಡಿರುತ್ತದೆ ; ಕೇಂದ್ರ ಸರ್ಕಾರದಿಂದ ಎಷ್ಟು ಹಣ ಬಂದಿರುವುದು ; ಹಾಗೂ ಇನ್ನೂ ಎಷ್ಟು ಹಣ ಬರಬೇಕಾಗಿದೆ ;

(ಊ) ಜಲಾನಯನ ಅಭಿವೃದ್ಧಿ ಯೋಜನೆಯಡಿ ರಾಜ್ಯ ಸರ್ಕಾರ ಬೆಳಗಾವಿ, ಬಾಗಲಕೋಟ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಎಷ್ಟು ಹಣ ಖರ್ಚು ಮಾಡಲಾಗಿದೆ ? (ತಾಲ್ಲೂಕುವಾರ ಮಾಹಿತಿ ಒದಗಿಸುವುದು).

## ರೈತರಿಂದ ಎ.ಪಿ.ಎಂ.ಸಿ ಮಾರುಕಟ್ಟೆ ಯಾರ್ಡ್‌ನಲ್ಲಿ ನೇರ ಖರೀದಿ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೬೮೩ (೩೦೪೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎ.ಪಿ.ಎಂ.ಸಿ ಮಾರ್ಕೆಟ್ ಯಾರ್ಡ್‌ನಲ್ಲಿ ರೈತರ ಮಾಲನ್ನು ಯಾವ ಪ್ರಕಾರವಾಗಿ ಖರೀದಿ ಮಾಡಲಾಗುತ್ತಿದೆ ;

(ಆ) ರೈತರ ಮಾಲನ್ನು ನೇರ ಖರೀದಿ ಮಾಡಲು ಯಾವ-ಯಾವ ಕ್ರಮ ಅನುಸರಿಸಲಾಗುತ್ತಿದೆ ;

(ಇ) ಕರ್ನಾಟಕದಲ್ಲಿ ಟ್ಯಾಕ್ಸ್ ಹೆಚ್ಚಾಗಿದ್ದು, ಕರ್ನಾಟಕ ಗೋವಿನ ಜೋಳವನ್ನು ನೇರವಾಗಿ ಸಾಂಗ್ಲಿ ಮಾರುಕಟ್ಟೆಗೆ ಒಯ್ದು ಮಾರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಎ.ಪಿ.ಎಂ.ಸಿ ಮಾರ್ಕೆಟ್ ಯಾರ್ಡ್‌ನಲ್ಲಿ ರೈತರಿಗೆ ಯಾವ ಸವಲತ್ತುಗಳನ್ನು ಕೊಡಲಾಗುತ್ತಿದೆ ;

(ಉ) ಬೆಳಗಾವಿ, ಬೈಲಹೊಂಗಲ ಹಾಗೂ ಸವದತ್ತಿ ಎ.ಪಿ.ಎಂ.ಸಿ ಮಾರುಕಟ್ಟೆ ಯಾರ್ಡ್‌ನಲ್ಲಿ ರೈತರಿಗೆ ಯಾವ ಸವಲತ್ತುಗಳನ್ನು ಕೊಡಲಾಗುತ್ತಿದೆ ;

(ಊ) ಬೆಳಗಾವಿ ಎ.ಪಿ.ಎಂ.ಸಿ ಮಾರುಕಟ್ಟೆ ಯಾರ್ಡ್‌ನಲ್ಲಿ ರೈತರಿಗಾಗಿ ಕಟ್ಟಿದ ರೈತ ಭವನದಲ್ಲಿ ಜಿಲ್ಲಾಧಿಕಾರಿಗಳು ಇಲೆಕ್ಷನ್ ಸಾಮಗ್ರಿಗಳನ್ನು ಇಟ್ಟಿರುವುದು ನಿಜವೇ ;

(ಋ) ಹಾಗಿದ್ದಲ್ಲಿ, ಅದನ್ನು ತೆಗೆಸಲು ಕ್ರಮ ಕೈಗೊಳ್ಳಲಾಗುವುದೇ ?

## ಅಕಾಲಿಕ ಮಳೆಯಿಂದ ರೈತರ ತೋಟಗಾರಿಕೆ ಬೆಳೆ ನಾಶ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೨೬೮೪ (೩೦೪೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯಲ್ಲಿ ಅಕಾಲಿಕ ಮಳೆಯಿಂದ ರೈತರು ಬೆಳೆದ ದ್ರಾಕ್ಷಿ, ಮಾವು ಮತ್ತು ದಾಳಿಂಬೆ ತೋಟಗಾರಿಕೆ ಬೆಳೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಕಾಲಿಕ ಆಲಿಕಲ್ಲು ಮಳೆಯಿಂದ ಎಲ್ಲ ಬೆಳೆ ಸಂಪೂರ್ಣವಾಗಿ ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬೆಳಗಾವಿ ಜಿಲ್ಲೆಯ ತೋಟಗಾರಿಕೆ ಅಧಿಕಾರಿಗಳು ಎಷ್ಟು ಹಾನಿ ಆಗಿರುವುದೆಂದು ಸರ್ಕಾರಕ್ಕೆ ವರದಿ ಮಾಡಿರುವುದು ; (ಯಾವ ಯಾವ ತಾಲ್ಲೂಕಿನಲ್ಲಿ ಎಷ್ಟು ಹಾನಿ ಆಗಿರುವುದು ವಿವರ ನೀಡಿ)

(ಈ) ರೈತರಿಗೆ ಬೆಳೆ ಹಾನಿ ಆದ ಬಗ್ಗೆ ಕೂಡಲೇ ಪರಿಹಾರ ಹಣ ನೀಡಲಾಗುವುದೇ ?

**ಅಕಾಲಿಕ ಮಳೆಯಿಂದ ರೈತರ ಬೆಳೆ ನಾಶವಾಗಿರುವುದಕ್ಕೆ ಪರಿಹಾರ.**

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೨೬೮೫ (೩೦೪೪) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಅಕಾಲಿಕ ಮಳೆಯಿಂದ ಜೋಳ, ಗೋಧಿ, ಕಡಲೆ, ಹತ್ತಿ ಹಾಗೂ ದ್ರಾಕ್ಷಿ ಬೆಳೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ದನಗಳಿಗೆ ಬೇಕಾಗುವ ಹೊಟ್ಟು–ಕಣಿಕೆ ಎಲ್ಲವೂ ಸಂಪೂರ್ಣ ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬೆಳಗಾವಿ ಜಿಲ್ಲೆ ಕೃಷಿ ಅಧಿಕಾರಿಗಳು ಎಷ್ಟು ಹಾನಿ ಆಗಿರುವುದೆಂದು ಸರ್ಕಾರಕ್ಕೆ ವರದಿ ಮಾಡಿರುವರು; ಯಾವ-ಯಾವ ತಾಲ್ಲೂಕಿನಲ್ಲಿ ಎಷ್ಟು-ಎಷ್ಟು ಹಾನಿ ಆಗಿರುವುದು ; (ವಿವರ ನೀಡುವುದು)

(ಈ) ರೈತರಿಗೆ ಬೆಳೆ ಹಾಗೂ ದನಕರುಗಳಿಗೆ ಬೇಕಾಗುವ ಹೊಟ್ಟು-ಕಣಿಕೆ ಹಾನಿಯಾಗಿರುವುದರಿಂದ ಕೂಡಲೇ ಪರಿಹಾರ ನೀಡಲಾಗುವುದೇ ?

## ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್‌ಗಳು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೨೬೮೬ (೩೦೪೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್‌ಗಳ ಹೆಸರು, ವಿಳಾಸ ಹಾಗೂ ಅವುಗಳ ವಾರ್ಷಿಕ ವಹಿವಾಟು, ಕಳೆದ ಹಣಕಾಸು ವರ್ಷದಲ್ಲಿ ಮಾಡಿರುವ ಲಾಭ, ಷೇರುದಾರರಿಗೆ ಹಂಚಿಕೆ ಮಾಡಿರುವ ಡಿವಿಡೆಂಡ್‌ನ ಸಂಪೂರ್ಣ ವಿವರ ನೀಡುವುದು ;

(ಆ) ಪ್ರತಿಯೊಂದು ಬ್ಯಾಂಕಿನಲ್ಲಿ ಯಾವ ಯಾವ ಸಾಲಗಳನ್ನು ಯಾವ ಬಡ್ಡಿ ದರದಲ್ಲಿ ನೀಡಲಾಗುತ್ತಿದೆ ;

(ಇ) ಯಾವ ಯಾವ ಡೆಪಾಸಿಟ್‌ಗಳಿಗೆ ಎಷ್ಟು ಬಡ್ಡಿ ದರ ನಿಗದಿಪಡಿಸಲಾಗಿದೆ ? (ಪ್ರತಿಯೊಂದು ಬ್ಯಾಂಕ್‌ವಾರು ವಿವರ ನೀಡುವುದು ಹಾಗೂ ಕಳೆದ ೦೩ ವರ್ಷಗಳಿಂದ ಷೇರುದಾರರು ಡಿವಿಡೆಂಡ್ ಪಡೆಯದೆ ಬ್ಯಾಂಕಿನಲ್ಲಿ ಉಳಿತಾಯವಾಗಿರುವ ಹಣದ ಮೊತ್ತವನ್ನು ವರ್ಷವಾರು ಮಾಹಿತಿ ನೀಡುವುದು)

## ರಾಮನಗರ ಲೋಕೋಪಯೋಗಿ ಇಲಾಖೆಯ ಇಂಜಿನಿಯರ್ ಮೇಲಿನ ಆರೋಪ

**ಪ್ರೊ. ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ ಹೊಂದಿದವರು) :-**

೨೬೮೭ (೩೦೪೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಮನಗರ ವಿಭಾಗದ ಲೋಕೋಪಯೋಗಿ ಇಲಾಖೆಯ ಸೂಪರಿಂಟೆಂಡಿಂಗ್ ಇಂಜಿನಿಯರ್ ಮೇಲೆ ಗಂಭೀರವಾದ ಹಣ ದುರುಪಯೋಗದ ಆಪಾದನೆಗಳಿದ್ದರೂ ಅವರಿಗೆ ಮುಖ್ಯ ಇಂಜಿನಿಯರ್ ಆಗಿ ಬಡ್ತಿ ನೀಡಲಾಗಿದೆ ಎನ್ನುವುದು ನಿಜವೇ ;

(ಆ) ಗಂಭೀರವಾದ ಹಣದುರುಪಯೋಗ ಆಪಾದನೆ ಹೊತ್ತಿರುವ ಅಭಿಯಂತರರಿಗೆ ವಿಚಾರಣೆ ಪೂರ್ಣಗೊಳ್ಳುವ ಮುನ್ನವೇ ಆತುರಾತುರವಾಗಿ ಬಡ್ತಿ ನೀಡಿರುವುದರ ಔಚಿತ್ಯವೇನು ;

(ಇ) ಉನ್ನತ ಸ್ಥಾನದಲ್ಲಿರುವ ಇಂಜಿನಿಯರ್‌ಗಳು ಕೆಲವೇ ಕಂಟ್ರಾಕ್ಟರ್‌ಗಳಿಗೆ ಅನುವು ಮಾಡಿಕೊಡುವ ಸಲುವಾಗಿ ಕಾಮಗಾರಿಗಳನ್ನು ಸಣ್ಣ ಸಣ್ಣ ವಿಭಾಗಗಳಾಗಿ ವಿಂಗಡಿಸಿ ೧೩೧೧ ಕಾಮಗಾರಿಗಳ ಪೈಕಿ ೮೯೧ ಕಾಮಗಾರಿಗಳನ್ನು ಕೇವಲ ಇಬ್ಬರು ಕಂಟ್ರಾಕ್ಟರ್‌ಗಳಿಗೆ ಲಭ್ಯವಾಗುವಂತೆ ವ್ಯವಸ್ಥೆ ಮಾಡಿದರೆನ್ನುವುದು ನಿಜವೇ ?

## ಮರಳು ತೆಗೆಯಲು ಇರುವ ಮಾನದಂಡಗಳು

**ಪ್ರೊ. ಪಿ.ವಿ. ಕೃಷ್ಣಭಟ್ಟ (ನಾಮನಿರ್ದೇಶನ ಹೊಂದಿದವರು) :-**

೨೬೮೮ (೩೧೧೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ಹಾಗೂ ಹೊಸನಗರ ತಾಲ್ಲೂಕುಗಳಲ್ಲಿ ಕ್ರಮವಾಗಿ ತುಂಗಾನದಿ ಹಾಗೂ ಶರಾವತಿ ನದಿಗಳಲ್ಲಿ ಮರಳು ತೆಗೆಯಲು ಅನುಮತಿ ನೀಡುವ ಇಲಾಖೆಯು ಒಂದೇ ಆಗಿದ್ದರೂ ಅನುಸರಿಸುತ್ತಿರುವ ಮಾನದಂಡಗಳು ಬೇರೆ ಬೇರೆಯಾಗಿವೆ ಎನ್ನುವ ಸಂಗತಿ ನಿಜವೇ ;

(ಆ) ಬೇರೆ ಬೇರೆ ಮಾನದಂಡಗಳನ್ನು ಅನುಸರಿಸಲು ಕಾರಣವೇನು ?

## ಸೌರ ವಿದ್ಯುತ್ ಉತ್ಪಾದನೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೮೯ (೩೦೫೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸೌರ ವಿದ್ಯುತ್ ಉತ್ಪಾದನೆಯನ್ನು ಪ್ರೋತ್ಸಾಹಿಸುವ ಸಲುವಾಗಿ ಸರ್ಕಾರ ಕೈಗೊಂಡ ಯೋಜನೆಗಳಾವುವು ;

(ಆ) ಈ ಸಂಬಂಧ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಗಳಾವುವು ;

(ಇ) ಗ್ರಾಮೀಣ ಮಟ್ಟದಲ್ಲಿ ಸೌರ ವಿದ್ಯುತ್ ಉತ್ಪಾದನೆಯ ಯೋಜನೆಯ ಅನುಷ್ಠಾನಕ್ಕೆ ಇರುವ ತೊಡಕುಗಳೇನು ; (ವಿವರ ನೀಡುವುದು)

(ಈ) ಸೌರ ವಿದ್ಯುತ್ ಉತ್ಪಾದನೆಯ ಯೋಜನೆಗಳನ್ನು ಯಾವಾಗ ಅನುಷ್ಠಾನಕ್ಕೆ ತರಲಾಗುವುದು; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ? (ಸಂಪೂರ್ಣ ವಿವರ ನೀಡುವುದು)

## ವಿಶೇಷ ಘಟಕ ಯೋಜನೆಯಡಿಯಲ್ಲಿ ಬಿಡುಗಡೆಯಾದ ಹಣ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬೯೦ (೩೧೦೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಗೆ ಸಂಬಂಧಪಟ್ಟಂತೆ ವಿಶೇಷ ಘಟಕ ಯೋಜನೆಯಡಿಯಲ್ಲಿ (ಎಸ್.ಸಿ.ಪಿ/ಟಿ.ಎಸ್.ಪಿ) ಈ ವರ್ಷ ಬಿಡುಗಡೆಯಾಗಿರುವ ಹಣವೆಷ್ಟು; ಖರ್ಚಾಗಿರುವ ಹಣವೆಷ್ಟು ಹಾಗೂ ಖರ್ಚಾಗದೇ ಉಳಿದಿರುವ ಹಣವೆಷ್ಟು ;

(ಆ) ಈ ಯೋಜನೆಯಡಿ ಕೈಗೊಂಡಿರುವ ಕಾರ್ಯಕ್ರಮಗಳು ಯಾವುವು ?

## ಯರಮರಸ್ ಹಾಗೂ ಬಳ್ಳಾರಿಯಲ್ಲಿ ಹೆಚ್ಚುವರಿ ವಿದ್ಯುತ್ ಉತ್ಪಾದನೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೬೯೧ (೩೦೫೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯರಮರಸ್ ಹಾಗೂ ಬಳ್ಳಾರಿ ವಿದ್ಯುತ್ ಉತ್ಪಾದನಾ ಕೇಂದ್ರಗಳಲ್ಲಿ ಹೆಚ್ಚುವರಿ ವಿದ್ಯುತ್ ಉತ್ಪಾದನೆಗೆ ಯಾವ ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ ;

(ಆ) ಈ ಯೋಜನೆಗಳಿಗೆ ಮಂಜೂರಾದ ಅನುದಾನ ಎಷ್ಟು ;

(ಇ) ಇಲ್ಲಿಯವರೆಗೆ ಉತ್ಪಾದನೆಯಾದ ಹೆಚ್ಚುವರಿ ವಿದ್ಯುತ್‌ನ ಪ್ರಮಾಣ ಎಷ್ಟು ;

(ಈ) ಈ ಯೋಜನೆಗಳಿಗೆ ಖರ್ಚಾದ ಅನುದಾನ ಎಷ್ಟು ?

## ಸಿ.ಎಂ.ಜಿ.ಎಸ್.ವೈ ಯೋಜನೆ ಅನುಷ್ಠಾನ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೬೯೨ (೩೦೫೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಖ್ಯಮಂತ್ರಿಗಳ ರಸ್ತೆ ನಿಧಿ ಯೋಜನೆಯಡಿ (ಸಿ.ಎಂ.ಜಿ.ಎಸ್.ವೈ) ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಮಂಜೂರಾದ ಯೋಜನೆಗಳೆಷ್ಟು ; (ವಿವರವಾದ ಮಾಹಿತಿ ಕೊಡುವುದು)

(ಆ) ಈ ಯೋಜನೆಗಳಿಗೆ ಇಲ್ಲಿಯವರೆಗೆ ಬಿಡುಗಡೆಯಾದ ಅನುದಾನ ಎಷ್ಟು ;

(ಇ) ಇಲ್ಲಿಯವರೆಗೆ ಖರ್ಚಾದ ಅನುದಾನ ಎಷ್ಟು ;

(ಈ) ಇಲ್ಲಿಯವರೆಗೆ ಎಷ್ಟು ಕೀ.ಮೀ. ರಸ್ತೆ ನಿರ್ಮಾಣ ಮಾಡಲಾಗಿದೆ ;

(ಉ) ಈ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರು ?

## ಗೃಹನಿರ್ಮಾಣ ಸಹಕಾರ ಸಂಘಗಳ ಕಾರ್ಯವೈಖರಿ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೨೬೯೩ (೩೦೫೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಇರುವ ಗೃಹನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಕೊಡುವುದು)

(ಆ) ಈ ಗೃಹನಿರ್ಮಾಣ ಸಹಕಾರ ಸಂಘಗಳು ಎಷ್ಟು ಜನ ಸದಸ್ಯರನ್ನು ಹೊಂದಿವೆ ; (ತಾಲ್ಲೂಕುವಾರು ಮಾಹಿತಿ ಕೊಡುವುದು)

(ಇ) ಈ ಸದಸ್ಯರಲ್ಲಿ ಎಷ್ಟು ಜನ ಸದಸ್ಯರಿಗೆ ನಿವೇಶನಗಳನ್ನು ಹಾಗೂ ಮನೆಗಳನ್ನು ವಿತರಿಸಲಾಗಿದೆ ;

(ಈ) ಈ ಗೃಹನಿರ್ಮಾಣ ಸಹಕಾರ ಸಂಘಗಳಲ್ಲಿ ಎಷ್ಟು ಸಂಘಗಳ ವಿರುದ್ಧ ಆಪಾದನೆಗಳಿವೆ ;

(ಉ) ಇವುಗಳ ವಿಚಾರಣೆ ಯಾವ ಹಂತದಲ್ಲಿವೆ; ಸರ್ಕಾರ ಕೈಗೊಂಡ ಕ್ರಮಗಳೇನು ?

## ಸಾರ್ವಜನಿಕ ಉದ್ದಿಮೆಗಳ ಲಾಭ/ನಷ್ಟ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೬೯೪ (೩೦೫೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಉದ್ದಿಮೆಗಳಲ್ಲಿ ಲಾಭದ ಉದ್ದಿಮೆ ಹಾಗೂ ನಷ್ಟದ ಉದ್ದಿಮೆ ಎಂದರೆ ಯಾವುದು ; (ವಿವರವಾದ ಮಾಹಿತಿ ಕೊಡುವುದು)

(ಆ) ಕರ್ನಾಟಕ ರಾಜ್ಯ ಹಣಕಾಸು ಆಯೋಗವು ಕಳೆದ ೩ ವರ್ಷಗಳಿಂದ ಲಾಭದಲ್ಲಿದೆಯೇ ; ಇದ್ದರೆ, ಎಷ್ಟು ಲಾಭದಲ್ಲಿದೆ ;

(ಇ) ಒಂದು ವೇಳೆ ಲಾಭದಲ್ಲಿ ಇದ್ದಲ್ಲಿ ಕಳೆದ ೩ ವರ್ಷಗಳ ಲಾಭವು ಒಟ್ಟಾರೆ ನಷ್ಟದ ಶೇಕಡಾ ೩೦ ಕ್ಕಿಂತ ಹೆಚ್ಚಾಗಿದೆಯೇ ;

(ಈ) ಒಟ್ಟಾರೆ ನಷ್ಟವು ಶೇಕಡಾ ೩೦ ಕ್ಕಿಂತ ಕಡಿಮೆ ಇದ್ದಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು ?

## ವರ್ಕ್ಸ್ ಚಾರ್ಜ್ ಸಿಬ್ಬಂದಿ ಸೇವೆ ಪರಿಗಣನೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೬೫೫ (೩೦೫೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ೨೨೪ ಬಿ ಅಡಿಯಲ್ಲಿ ಬರುವ ೨೪೭ ಎ ಪ್ರಕಾರ ಲೋಕೋಪಯೋಗಿ ಇಲಾಖೆಯಲ್ಲಿ ವರ್ಕ್ಸ್ ಚಾರ್ಜ್ ಸಿಬ್ಬಂದಿಯಾಗಿ ಸಲ್ಲಿಸಿರುವ ಒಟ್ಟು ಸೇವೆಯಲ್ಲಿ ಕಡಿತಗೊಳಿಸಲಾದ ೫ ವರ್ಷಗಳ ಸೇವೆಯನ್ನು ಸೇರಿದಂತೆ ಸಂಪೂರ್ಣ ಸೇವೆಯನ್ನು ಪಿಂಚಣಿ ಉದ್ದೇಶಕ್ಕೆ ಅರ್ಹತಾದಾಯಕ ಸೇವೆಯನ್ನು ಸೇರಿಸುವ ವಿಚಾರ ಯಾವ ಹಂತದಲ್ಲಿದೆ ; (ವಿವರ ಒದಗಿಸಿರಿ)

(ಆ) ವರ್ಕ್ಸ್ ಚಾರ್ಜ್ ಸಿಬ್ಬಂದಿಗೆ ಅರ್ಹತಾದಾಯಕ ಸೇವೆಯನ್ನು ಸೇರಿಸುವ ವಿಚಾರವಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸಿರಿ)

## ಕೊಳ್ಳೇಗಾಲದಿಂದ ಶ್ರೀ ಮಲೈಮಹದೇಶ್ವರ ಬೆಟ್ಟದವರೆಗಿನ ರಸ್ತೆ ದುರಸ್ತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೨೬೫೬ (೩೦೭೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಳ್ಳೇಗಾಲದಿಂದ ಶ್ರೀ ಮಲೈಮಹದೇಶ್ವರ ಬೆಟ್ಟದವರೆಗಿನ ರಸ್ತೆಯು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಸದರಿ ರಸ್ತೆಯನ್ನು ಉತ್ತಮಪಡಿಸಿ ಭಕ್ತಾಧಿಗಳಿಗೆ ಅನುಕೂಲ ಮಾಡಿಕೊಡಲು ಕಾರ್ಯಯೋಜನೆಯುನ್ನು ರೂಪಿಸಲಾಗಿದೆಯೇ ;

(ಇ) ಈ ಯೋಜನೆಯ ರೂಪುರೇಷೆಗಳೇನು ಹಾಗೂ ಅದರ ಅಂದಾಜು ಮೊತ್ತವೆಷ್ಟು; (ವಿವರ ಸಲ್ಲಿಸುವುದು)

(ಈ) ಸದರಿ ಕಾಮಗಾರಿಯು ಯಾವ ಹಂತದಲ್ಲಿದೆ;

(ಉ) ಈ ಯೋಜನೆಯುನ್ನು ಯಾವ ಕಾಲಮಿತಿಯುಲ್ಲಿ ಪೂರ್ಣಗೊಳಿಸಲಾಗುವುದು ?

## ರೆಮ್ಸ್ ಸಂಸ್ಥೆ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೨೬೮೭ (೩೦೭೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ರೈತರ ಹಿತದೃಷ್ಟಿಯಿಂದ ರೆಮ್ಸ್ ಎಂಬ ಖಾಸಗಿ ಕಂಪನಿಯನ್ನು ಹುಟ್ಟು ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಇದರ ಉದ್ದೇಶ ಹಾಗೂ ಇದರಿಂದ ರೈತರಿಗೆ ಆಗುವ ಅನುಕೂಲಗಳೇನು; (ವಿವರ ನೀಡುವುದು)

(ಇ) ಈಗಾಗಲೇ ಸುಮಾರು ೪೪ ಎ.ಪಿ.ಎಂ.ಸಿ.,ಗಳಲ್ಲಿ ಕಳೆದ ೫ ವರ್ಷಗಳಲ್ಲಿ ಕಿಯೋನಿಕ್ಸ್ ಸಂಸ್ಥೆಯ ಮೂಲಕ ಜಾರಿಗೆ ತಂದಿರುವ

ಈ–ಟೆಂಡರ್ ವ್ಯವಸ್ಥೆಗೂ ಹಾಗೂ ರೆಮ್ಸ್ ಕಂಪನಿಗೂ ಇರುವ ವ್ಯತ್ಯಾಸವೇನು; (ಪೂರ್ಣ ವಿವರ ನೀಡುವುದು)

(ಈ) ರೆಮ್ಸ್ ಕಂಪನಿಯ ಮೂಲಕ ಕಳೆದ ಒಂದು ವರ್ಷದ ಅವಧಿಯಲ್ಲಿ ಆನ್ ಲೈನ್ ಮಾರುಕಟ್ಟೆ ವ್ಯವಸ್ಥೆ ಮೂಲಕ ಖರೀದಿಸಿರುವ ವಾಣಿಜ್ಯ ಬೆಳೆ, ನೋಂದಾಯಿತ ರೈತರ ವಿವರಗಳು, ನೋಂದಾಯಿತ ರೈತರ ಸಂಖ್ಯೆ, ಅವರಿಂದ ಖರೀದಿಸಿರುವ ವಾಣಿಜ್ಯ ಹುಟ್ಟುವಳಿಗಳ ಪ್ರಮಾಣ, ಅವರಿಗೆ ಪಾವತಿ ಮಾಡಿರುವ ಮೊತ್ತದ ವಿವರಗಳನ್ನು ಒದಗಿಸುವುದು ; (ಮಾಹೆಯಾನ ವಿವರ ಒದಗಿಸುವುದು)

(ಉ) ರೆಮ್ಸ್ ಸಂಸ್ಥೆಯ ಆದಾಯದ ಮೂಲಗಳೇನು; ಸದರಿ ಸಂಸ್ಥೆಯಲ್ಲಿ ಎನ್.ಸಿ.ಡಿ.ಎಕ್ಸ್. ಪಾತ್ರವೇನು ;

(ಊ) ಈ ಕಂಪನಿಯಲ್ಲಿರುವ ಅಧಿಕಾರಿ/ಅಧಿಕಾರೇತರರ ಪೂರ್ಣ ವಿವರಗಳನ್ನು ನೀಡುವುದು ;

(ಋ) ಈ ಸಂಸ್ಥೆಗೆ ನಿವೃತ್ತ ಸರ್ಕಾರಿ/ಸ್ವಾಯತ್ತ ಸಂಸ್ಥೆ ಅಥವಾ ಮಂಡಲಿಗಳ ಅಧಿಕಾರಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆಯೇ ? (ಪೂರ್ಣ ವಿವರ ಒದಗಿಸುವುದು)

## ಪಿಕಾರ್ಡ್ ಬ್ಯಾಂಕ್‌ಗಳಿಂದ ಕೊಳವೆ ಬಾವಿಗಳಿಗೆ ಸಾಲ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೨೬೯೮ (೩೦೫೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಿಕಾರ್ಡ್ ಬ್ಯಾಂಕ್‌ಗಳಿಂದ ತೆರೆದ ಮತ್ತು ಕೊಳವೆ ಬಾವಿಗಾಗಿ ಸಾಲ ಪಡೆದು ವಿಫಲಗೊಂಡಿರುವ ಬಾವಿಗಳ ಸಲುವಾಗಿ

ಸರ್ಕಾರ ಅಸಲು, ಬಡ್ಡಿ, ಸುಸ್ತಿ ಬಡ್ಡಿಯನ್ನು ಬ್ಯಾಂಕ್‌ಗಳಿಗೆ ಪಾವತಿಸುವ ಯೋಜನೆ ಜಾರಿಯಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಯೋಜನೆಯ ಮಾನದಂಡಗಳೇನು ; ಎಂದಿನಿಂದ ಜಾರಿಯಲ್ಲಿದೆ ; (ವಿವರ ಸಲ್ಲಿಸುವುದು)

(ಇ) ಸದರಿ ಬ್ಯಾಂಕ್‌ಗಳಲ್ಲಿ ಸಾಲ ಪಡೆದು ವಿಫಲಗೊಂಡಿರುವ ತೆರೆದ ಮತ್ತು ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಈ ಬಾವಿಗಳ ಸಲುವಾಗಿ ಎಷ್ಟು ಮೊತ್ತವನ್ನು ಸರ್ಕಾರ ಬ್ಯಾಂಕ್‌ಗಳಿಗೆ ಪಾವತಿಸಬೇಕಾಗಿದೆ ; (ಜಿಲ್ಲಾವಾರು ವಿವರ ಸಲ್ಲಿಸುವುದು)

(ಈ) ಸದರಿ ಮೊತ್ತವನ್ನು ಬ್ಯಾಂಕುಗಳಿಗೆ ಪಾವತಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ನೈಸರ್ಗಿಕ ಕೃಷಿ ಪದ್ಧತಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೨೬೯ (೩೦೭೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ತಜ್ಞ ಸುಭಾಷ್ ಪಾಳೇಕಾರ್‌ರವರ ಶೂನ್ಯ ಬಂಡವಾಳದ ನೈಸರ್ಗಿಕ ಕೃಷಿ ಪದ್ಧತಿಯನ್ನು ರಾಜ್ಯದಲ್ಲಿ ಕೆಲವು ರೈತರು ಅಳವಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಎಷ್ಟು ಮಂದಿ ರೈತರು ಎಷ್ಟು ವಿಸ್ತೀರ್ಣದಲ್ಲಿ ಈ ಪದ್ಧತಿಯನ್ನು ಅನುಸರಿಸಿ ಕೃಷಿ ಮಾಡುತ್ತಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ನೈಸರ್ಗಿಕ ಕೃಷಿ ಪದ್ಧತಿಯನ್ನು ರಾಜ್ಯದಲ್ಲಿ ಜಾರಿಗೆ ತರಲು ಸರ್ಕಾರ ಚಿಂತಿಸಿದೆಯೇ ;

(ಈ) ಹಾಗಾದರೆ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ಸಲ್ಲಿಸುವುದು)

(ಉ) ಸದರಿ ಕೃಷಿ ಪದ್ಧತಿಯನ್ನು ಹಂತಹಂತವಾಗಿ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಸಂಶೋಧನೆ ಮೂಲಕ ಜಾರಿಗೆ ತರಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

## ಉದ್ಯಾನವನ ಅಭಿವೃದ್ಧಿ

ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-

೨೭೦೦ (ಇ೦೬೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗದಗ ಬೆಟಗೇರಿ ಅವಳಿ ನಗರಗಳಲ್ಲಿ ಉದ್ಯಾನವನ ಅಭಿವೃದ್ಧಿಗಾಗಿ ೨೦೧೧-೨೦೧೨ ರಿಂದ ಇಲ್ಲಿಯವರೆಗೆ ಮೀಸಲಿಟ್ಟಿರುವ ಹಣ ಎಷ್ಟು ; ಈ ರೀತಿ ಮೀಸಲಿಟ್ಟ ಹಣವನ್ನು ಯಾವ ರೀತಿ ವಿನಿಯೋಗಿಸಲಾಗಿದೆ ;

(ಆ) ಉದ್ಯಾನವನಕ್ಕೆ ಮೀಸಲಿಟ್ಟ ಹಣವನ್ನು ಹಸಿರೇ-ಉಸಿರು ಕಾರ್ಯಕ್ರಮಕ್ಕೆ ವಿನಿಯೋಗಿಸಿರುವುದು ನಿಜವೇ; ಈ ರೀತಿ ಇತರೆ ಕಾಮಗಾರಿಗೆ ಬಳಸಲು ಅವಕಾಶವಿದೆಯೆ; ಯಾವ ಆಧಾರದ ಮೇಲೆ ಬಳಸಲಾಗಿದೆ ;

(ಇ) ಹಸಿರೇ-ಉಸಿರು ಕಾರ್ಯಕ್ರಮವೂ ಸಹ ಸಮರ್ಪಕವಾಗಿ ಅನುಷ್ಠಾನಗೊಂಡಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ಕಲ್ಲಿದ್ದಲ ಗಣಿಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೨೭೦೧ (೩೦೬೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಶಾಖೋತ್ಪನ್ನ ವಿದ್ಯುತ್ ಸ್ಥಾವರಕ್ಕಾಗಿ ರಾಜ್ಯಕ್ಕೆ ಹಂಚಿಕೆಯಾಗಿದ್ದ ಕಲ್ಲಿದ್ದಲು ಗಣಿಗಳು ಯಾವುವು ;

(ಆ) ಹಂಚಿಕೆಯಾಗಿದ್ದ ಗಣಿಗಳಲ್ಲಿ ಯಾವುದಾದರೂ ಗಣಿ ಗುತ್ತಿಗೆಯನ್ನು ಸುಪ್ರೀಂ ಕೋರ್ಟ್ ತಡೆಹಿಡಿದಿದೆಯೇ ; ತಡೆಹಿಡಿದಿದ್ದಲ್ಲಿ ಕಾರಣವೇನು ;

(ಇ) ಇದನ್ನು ಮರಳಿ ಪಡೆಯಲು ಯಾವ ರೀತಿಯ ಪ್ರಯತ್ನ ನಡೆಸಲಾಗಿದೆ ;

(ಈ) ಸುಪ್ರೀಂ ಕೋರ್ಟ್‌ನಿಂದ ತಡೆಹಿಡಿಯಲಾಗಿರುವ ಗಣಿ ಕೈತಪ್ಪಿದ್ದಲ್ಲಿ, ಎಷ್ಟು ಪ್ರಮಾಣದ ವಿದ್ಯುತ್ ಸಾಮರ್ಥ್ಯ ತಗ್ಗಲಿದೆ ;

(ಉ) ವಿದ್ಯುತ್ ಉತ್ಪಾದನೆಯಲ್ಲಿನ ಈ ಕೊರತೆಯನ್ನು ಹೇಗೆ ಸರಿದೂಗಿಸಲಾಗುವುದು ?

## ವೆನಿಲ್ಲಾ ಬೆಳೆಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೨೭೦೨ (೩೦೬೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಐದು ವರ್ಷಗಳಲ್ಲಿ ವೆನಿಲ್ಲಾ ಬೆಳೆಯನ್ನು ರಾಜ್ಯದಲ್ಲಿ ಎಷ್ಟು ಪ್ರಮಾಣದಲ್ಲಿ ಬೆಳೆಯಲಾಗುತ್ತಿತ್ತು ; (ವರ್ಷವಾರು ಮಾಹಿತಿ ನೀಡುವುದು)

(ಆ) ಅಧಿಕ ಲಾಭ ನೀಡುವ ತೋಟಗಾರಿಕೆ ಎಂದೇ ಬಿಂಬಿತವಾಗಿದ್ದ, ವೆನಿಲ್ಲಾ ಬೆಳೆ ಗಣನೀಯ ಪ್ರಮಾಣದಲ್ಲಿ ಕುಸಿತ ಕಂಡಿರುವುದು ನಿಜವೇ; ಇದಕ್ಕೆ ಕಾರಣವೇನು ;

(ಇ) ಪ್ರಸ್ತುತ ವೆನಿಲ್ಲಾ ಬೆಳೆಗಾರರು ಸಾಲಗಾರರಾಗಿರುವುದು ನಿಜವೇ ; (ವಿವರ ನೀಡುವುದು)

(ಈ) "ಸಾಲದ ಬೆಳೆ"ಯಾಗಿರುವ ಇದನ್ನು ಮತ್ತೊಮ್ಮೆ "ಬಂಗಾರದ ಬೆಳೆ"ಯಾಗಿಸಲು ಯಾವ ರೀತಿಯ ವಿಶೇಷ ಕ್ರಮ ಹಾಗೂ ಪ್ರೋತ್ಸಾಹ ನೀಡಲಾಗುವುದು ?

## ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೭೦೩ (೩೦೬೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೆಕ್ಕೆಜೋಳಕ್ಕೆ ಈ ಬಾರಿ ಬೆಂಬಲ ಬೆಲೆ ನೀಡಲಾಗುತ್ತಿದೆಯೇ ;

(ಆ) ಕಳೆದ ವರ್ಷ ಕೃಷಿ ಬೆಲೆ ಆಯೋಗ ನಿಗದಿಪಡಿಸಿದ್ದ ಬೆಂಬಲ ಬೆಲೆ ಎಷ್ಟು ; ಕಳೆದ ವರ್ಷ ನೀಡಿದ ಬೆಂಬಲ ಬೆಲೆ ಎಷ್ಟು ;

(ಇ) ಈ ಬಾರಿ ಕೃಷಿ ಬೆಲೆ ಆಯೋಗ ನಿಗದಿಪಡಿಸಿರುವ ಬೆಂಬಲ ಬೆಲೆ ಎಷ್ಟು ;

(ಈ) ಈ ಬಾರಿ ಬೆಂಬಲ ಬೆಲೆ ನೀಡುತ್ತಿದ್ದಲ್ಲಿ, ಬೆಂಬಲ ಬೆಲೆ ಎಷ್ಟು ; ನೀಡುತ್ತಿಲ್ಲವಾದಲ್ಲಿ ಕಾರಣವೇನು ;

(ಉ) ಕಳೆದ ವರ್ಷ ಎಷ್ಟು ಪ್ರಮಾಣದ ಮೆಕ್ಕೆಜೋಳವನ್ನು ಸಂಗ್ರಹಿಸಲಾಗಿದೆ ;

(ಊ) ಸಂಗ್ರಹಿಸಿರುವ ಮೆಕ್ಕೆಜೋಳವನ್ನು ಯಾವ ರೀತಿಯಲ್ಲಿ ವಿನಿಯೋಗಿಸಲಾಗುತ್ತಿದೆ ?

## ಹೈವೋಲ್ಟೇಜ್ ವಿದ್ಯುತ್ ಪರಿವರ್ತಕಗಳ ಸುರಕ್ಷತಾ ಕ್ರಮ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೭೦೪ (೩೦೬೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೈದರಾಬಾದ್-ಕರ್ನಾಟಕ ಪ್ರದೇಶದ ೬ ಜಿಲ್ಲೆ ಹಾಗೂ ಹರಪನಹಳ್ಳಿಯಲ್ಲಿ ಕಲಬುರಗಿ ವಿದ್ಯುತ್ ಸರಬರಾಜು ಕಂಪನಿ (ಜೆಸ್ಕಾಂ) ಸ್ಥಾಪಿಸಿರುವ ಹೈವೋಲ್ಟೇಜ್ ವಿದ್ಯುತ್ ಪರಿವರ್ತಕ (TC) ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಎಷ್ಟು ಟಿಸಿ ಗಳಿಗೆ ಜೆಸ್ಕಾಂ ಸುರಕ್ಷತಾ ಕ್ರಮದ ಅಡಿ ಬೇಲಿ (Fencing) ಹಾಕಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಜೆಸ್ಕಾಂನಿಂದ ಟಿಸಿ ಗಳಿಗೆ ಬೇಲಿ ಹಾಕದೆ ಇದ್ದು, ಸುರಕ್ಷತಾ ಕ್ರಮ ಕೈಗೊಳ್ಳುವಲ್ಲಿ ದಿವ್ಯ ನಿರ್ಲಕ್ಷತನದಿಂದ ಸಿಬ್ಬಂದಿಗಳ, ಜನಸಾಮಾನ್ಯರ, ಜಾನುವಾರುಗಳಿಗೆ ಆದ ಪ್ರಾಣ ಹಾನಿ ಹಾಗೂ ಇನ್ನಿತರೆ ಅನಾಹುತಗಳು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದರೆ, ಕಳೆದ ೨ ವರ್ಷಗಳಲ್ಲಿ ಸಂಭವಿಸಿದ ಘಟನೆಗಳೆಷ್ಟು; (ಜಿಲ್ಲಾವಾರು ಪ್ರತ್ಯೇಕ ವಿವರ ನೀಡುವುದು)

(ಈ) ಈ ನಿಟ್ಟಿನಲ್ಲಿ ಇಲಾಖೆಯಿಂದ ಸೇಫ್ಟಿ ಆಡಿಟ್ (ಸುರಕ್ಷತಾ ಕ್ರಮಗಳ ಲೆಕ್ಕ ಪರಿಶೀಲನೆ) ಮಾಡಲಾಗಿದೆಯೇ ? (ವಿವರ ನೀಡುವುದು)

# "ಮೈಸೂರ್ ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್"ನ (ಎಂ.ಎಸ್.ಐ.ಎಲ್) ಭ್ರಷ್ಟಾಚಾರ ಪ್ರಕರಣಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೨೭೦೫ (೩೦೬೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರ್ ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ (ಎಂ.ಎಸ್.ಐ.ಎಲ್)ನಲ್ಲಿ ಕಳೆದ ೫ ವರ್ಷಗಳಲ್ಲಿ ಬೆಳಕಿಗೆ ಬಂದ ಹಣಕಾಸು ಅವ್ಯವಹಾರ, ಅಧಿಕಾರಿಗಳ ದುರುಪಯೋಗ, ಕರ್ತವ್ಯಲೋಪ ಹಾಗೂ ಭ್ರಷ್ಟಾಚಾರ ಪ್ರಕರಣಗಳೆಷ್ಟು ; (ಮಾಹಿತಿ ನೀಡುವುದು)

(ಆ) ಈ ಪ್ರಕರಣಗಳಿಂದ ರಾಜ್ಯಕ್ಕೆ ಎಷ್ಟು ಪ್ರಮಾಣದ ನಷ್ಟ ಉಂಟಾಗಿದೆ ; ಇದಕ್ಕೆ ಕಾರಣಗಳೇನು ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಬೆಂಗಳೂರು ಹೆಚ್.ಎ.ಎಲ್ (HAL) ವಿಮಾನ ನಿಲ್ದಾಣದ ಹತ್ತಿರವಿರುವ ವಾಯು ಸರಕು ಸಂಕೀರ್ಣದಲ್ಲಿರುವ ಕಾರ್ಗೊ ಟರ್ಮಿನಲ್ (CARGO TERMINAL)ನ್ನು ಖಾಸಗಿ ಕಂಪನಿಗೆ ಗುತ್ತಿಗೆ ನೀಡಲಾಗಿದೆಯೇ ? (ಗುತ್ತಿಗೆ ವಿವರ ಅನುಮೋದನೆ ಮಾಡಿದ ಸಭೆಗಳ ವಿವರ ನೀಡುವುದು)

F-3 - B/B

## ರೈತರಿಗೆ ಉಚಿತವಾಗಿ ಡೀಸಲ್ ಪಂಪ್‌ಸೆಟ್‌ಗಳನ್ನು ನೀಡುವ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ) :-**

೨೭೦೬ (೩೧೧೬) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೃಷಿಭಾಗ್ಯ ಯೋಜನೆಯಡಿ ರೈತರಿಗೆ ಉಚಿತವಾಗಿ ಡೀಸಲ್ ಪಂಪ್‌ಸೆಟ್‌ಗಳನ್ನು ನೀಡುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಈ ಯೋಜನೆಯ ಅಡಿಯಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುಗಳನ್ನು ಆಯ್ಕೆ ಮಾಡಲಾಗಿದೆ ;

(ಇ) ರೈತರು ಇವುಗಳನ್ನು ಪಡೆದುಕೊಳ್ಳಲು ಇರುವ ಮಾನದಂಡಗಳೇನು ; ಮತ್ತು ಯಾವ ಮಾನದಂಡಗಳ ಮೇಲೆ ಆಯ್ಕೆ ಮಾಡಲಾಗುತ್ತದೆ ?

## ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ರಟ್ಟಕಲ್ ಗ್ರಾಮದಿಂದ ಮಹಾಗಾಂವ ಕ್ರಾಸ್‌ವರೆಗೆ ರಸ್ತೆ ಕಾಮಗಾರಿ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೭೦೭ (೩೦೬೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲೂಕಿನ ರಟ್ಟಕಲ್ ಗ್ರಾಮದಿಂದ ಮಹಾಗಾಂವ ಕ್ರಾಸ್‌ವರೆಗೆ ರಸ್ತೆ ಕಾಮಗಾರಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕಿದೆಯೇ; ಇದ್ದರೆ, ಕಾಮಗಾರಿ ಪ್ರಾರಂಭವಾಗಿರುವುದು ಯಾವಾಗ ಮತ್ತು ಅದಕ್ಕೆ ಬಿಡುಗಡೆಯಾಗಿರುವ ಅನುದಾನವೆಷ್ಟು ; (ಮಾಹಿತಿ ನೀಡುವುದು).

(ಆ) ಈ ಕಾಮಗಾರಿಗೆ ವಹಿಸಿದ ಏಜೆನ್ಸಿ (agency) ಯಾವುದು ; ಇಲ್ಲಿಯವರೆಗೆ ಖರ್ಚು ಮಾಡಿದ ಅನುದಾನವೆಷ್ಟು ; (ಮಾಹಿತಿ ನೀಡುವುದು).

(ಇ) ಸದರಿ ಕಾಮಗಾರಿಯು ಪೂರ್ಣಗೊಳಿಸದೆ ಮಂದಗತಿಯಲ್ಲಿ ನಡೆಯುತ್ತಿರುವುದರಿಂದ ರಸ್ತೆಯ ಧೂಳಿನಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ನರಕಯಾತನೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ನಿಟ್ಟಿನಲ್ಲಿ ಸರ್ಕಾರವು ಕೈಗೊಳ್ಳುವ ಕ್ರಮಗಳೇನು ; (ವಿವರ ನೀಡುವುದು).

(ಈ) ೦ಚುಾವ ಕಾಲವಿುತಿಂವೊಳಗೆ ಈ ಕಾವುಂಗಾರಿ ಪೂರ್ಣಗೊಳಿಸಲಾಗುವುದು ? (ಮಾಹಿತಿ ನೀಡುವುದು).

## ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ತೋಟಗಾರಿಕೆ ಯೋಜನೆಗಳಿಗೆ ಬಿಡುಗಡೆಯಾಗಿರುವ ಅನುದಾನ

**ಶ್ರೀ ಅಮರನಾಥ ಪಾಟೀಲ್** (ಪದವೀಧರರ ಕ್ಷೇತ್ರ) :-

೨೭೦೮ (೩೦೫೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತೋಟಗಾರಿಕೆ ಇಲಾಖೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರಕಾರದಿಂದ ತೋಟಗಾರಿಕೆ ಪ್ರೋತ್ಸಾಹಿಸುವ ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು).

(ಆ) ಈ ಯೋಜನೆಗಳಿಗಾಗಿ ೨೦೧೩-೧೪, ೨೦೧೪-೧೫ನೇ ಸಾಲಿನಲ್ಲಿ ಸಾಮಾನ್ಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು).

(ಇ) ಬಿಡುಗಡೆಯಾದ ಅನುದಾನದ ಪೈಕಿ ಇಲ್ಲಿಯವರೆಗೆ ಖರ್ಚಾದ ಹಾಗೂ ಬಾಕಿ ಉಳಿದ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು).

(ಈ) ಈ ಯೋಜನೆಗಳ ಲಾಭ / ಪ್ರಯೋಜನೆ ಪಡೆದುಕೊಂಡವರ ಫಲಾನುಭವಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು).

## ರಾಜ್ಯದಲ್ಲಿ "ಶಾದಿಭಾಗ್ಯ" ಯೋಜನೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೨೭೦೯ (೩೦೫೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ "ಶಾದಿಭಾಗ್ಯ" ಯೋಜನೆ ಜಾರಿಯಲ್ಲಿದೆಯೇ ; ಇದ್ದಲ್ಲಿ, ಈ ಯೋಜನೆ ಜಾರಿಗೆ ಬಂದಿದ್ದು ಯಾವಾಗ ; (ವಿವರ ನೀಡುವುದು).

(ಆ) ಸದರಿ ಯೋಜನೆಯಡಿಯಲ್ಲಿ ಕಳೆದ ೨ ವರ್ಷಗಳಲ್ಲಿ ಲಾಭ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ? (ಜಾತಿವಾರು, ಉಪಜಾತಿವಾರು ಮತ್ತು ಜಿಲ್ಲಾವಾರು ಪ್ರತ್ಯೇಕ ಮಾಹಿತಿ ನೀಡುವುದು).

## ಹಾಲು ಉತ್ಪಾದಕ ರೈತರಿಗೆ ಪ್ರೋತ್ಸಾಹಧನ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೧೦ (೩೧೧೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಾಲು ಉತ್ಪಾದಕ ರೈತರಿಗೆ ಪ್ರತೀ ಲೀಟರ್ ಹಾಲಿಗೆ ಪ್ರತಿ ತಿಂಗಳು ನೀಡಲಾಗುತ್ತಿರುವ ರೂ. ೪.೦೦ ಪ್ರೋತ್ಸಾಹ ಧನದ ಮೊತ್ತವೆಷ್ಟು ;

(ಆ) ಪ್ರೋತ್ಸಾಹ ಧನವನ್ನು ಪ್ರತಿ ತಿಂಗಳು ನಿಯಮಿತವಾಗಿ ಪಾವತಿಸಲಾಗುತ್ತಿದೆಯೇ ; ಇಲ್ಲದಿದ್ದರೆ, ಇಲ್ಲಿಯವರೆಗೆ ರೈತರಿಗೆ ಪಾವತಿಸಬೇಕಾದ ಬಾಕಿ ಹಣ ಎಷ್ಟು ; ಎಷ್ಟು ದಿನಗಳಿಂದ ಬಾಕಿ ಉಳಿದಿದೆ; ಬಾಕಿ ಹಣವನ್ನು ಯಾವಾಗ ಪಾವತಿಸಲಾಗುವುದು ;

(ಇ) ರೈತರಿಗೆ ನೀಡುವ ಪ್ರೋತ್ಸಾಹ ಧನವನ್ನು ಪ್ರತಿ ತಿಂಗಳು ನೀಡದೆ ಬಾಕಿ ಉಳಿಸಿಕೊಳ್ಳುವುದರಿಂದ ರೈತರಿಗೆ ತೊಂದರೆಯಾಗುವುದರ ಜೊತೆಗೆ ಹಾಲು ಉತ್ಪಾದನೆಗೆ ಹಿನ್ನಡೆಯಾಗುವುದಿಲ್ಲವೇ ?

## ಜಮಖಂಡಿ–ಸಾವಳಗಿ ರಸ್ತೆಯನ್ನು ಮೇಲ್ದರ್ಜೆಗೇರಿಸುವುದು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೧೧ (೩೦೬೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣಾ ನದಿಗೆ ಅಡ್ಡಲಾಗಿ ನಿರ್ಮಿಸುತ್ತಿರುವ ಜಂಬ್ಯ ಬಿ.ಕೆ. ಬ್ರಿಡ್ಜ್ ಮುಖಾಂತರ ಹಾದು ಹೋಗುವ ಜಮಖಂಡಿ–ಸಾವಳಗಿ ಮತ್ತು

ಸಾವಳಗಿ–ತೆಲಸಂಗ ಕ್ರಾಸ್ ಜಿಲ್ಲಾ ಮುಖ್ಯ ರಸ್ತೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದರೆ, ಅದಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು ;

(ಆ) ಈ ರಸ್ತೆಯು ಜಮಖಂಡಿ ತಾಲ್ಲೂಕು ಸಾವಳಗಿ ಮಾರ್ಗವಾಗಿ ನೇರವಾಗಿ ಮಹಾರಾಷ್ಟ್ರಕ್ಕೆ ಸಂಪರ್ಕ ಕಲ್ಪಿಸುತ್ತಿದ್ದು, ಈ ಕಾಮಗಾರಿಯನ್ನು ಯಾವಾಗ ಕೈಗೊಳ್ಳಲಾಗುವುದು ?

## ರಾಜ್ಯದಲ್ಲಿ ಉತ್ಪಾದನೆ ಆಗುತ್ತಿರುವ ಸಕ್ಕರೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೧೨ (೩೦೬೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರಿ ಸಕ್ಕರೆ ಕಾರ್ಖಾನೆಗಳು ಮತ್ತು ಖಾಸಗಿ ಸಕ್ಕರೆ ಕಾರ್ಖಾನೆಗಳು ಪ್ರತ್ಯೇಕವಾಗಿ ಉತ್ಪಾದಿಸುತ್ತಿರುವ ಸಕ್ಕರೆಯ ಪ್ರಮಾಣ ಎಷ್ಟು ;

(ಆ) ರಾಜ್ಯದಲ್ಲಿ ಒಂದು ವರ್ಷಕ್ಕೆ ಬೇಕಾಗುವ ಒಟ್ಟು ಸಕ್ಕರೆ ಪ್ರಮಾಣ ಎಷ್ಟು; ಹೆಚ್ಚಿನ ಸಕ್ಕರೆಯನ್ನು ಯಾವ ಯಾವ ರಾಜ್ಯಗಳಿಗೆ ಕಳುಹಿಸಲಾಗುತ್ತದೆ ;

(ಇ) ರಾಜ್ಯದಲ್ಲಿರುವ ಯಾವ ಯಾವ ಸಹಕಾರಿ ಸಕ್ಕರೆ ಕಾರ್ಖಾನೆಗಳು ವಿದ್ಯುತ್ ಉತ್ಪಾದನೆ ಮತ್ತು ಡಿಸ್ಟಿಲರಿ ಘಟಕಗಳನ್ನು ಹೊಂದಿವೆ ;

(ಈ) ರಾಜ್ಯದಲ್ಲಿರುವ ಯಾವ ಯಾವ ಸಹಕಾರಿ ಕಾರ್ಖಾನೆಗಳು ಲಾಭದಾಯಕವಾಗಿ ನಡೆಯುತ್ತಿವೆ ? (ವಿವರಣೆ ನೀಡುವುದು)

## ಔರಾದ್ ಸದಾಶಿವಗಢ ರಾಜ್ಯ ಹೆದ್ದಾರಿ-೩೪ನ್ನು ಮೇಲ್ದರ್ಜೆಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೧೩ (೩೮೯೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಔರಾದ್ ಸದಾಶಿವಗಢ ರಾಜ್ಯ ಹೆದ್ದಾರಿ-೩೪ನ್ನು ಚತುಷ್ಪಥ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ, ಈ ಕಾಮಗಾರಿಗೆ ತಗಲುವ ಅಂದಾಜು ವೆಚ್ಚ ಎಷ್ಟು ;

(ಆ) ವಾಹನ ದಟ್ಟಣೆ ಇರುವ ಈ ರಸ್ತೆಗೆ ಹೊಂದಿಕೊಂಡಂತೆ ನಾಲ್ಕೈದು ಸಕ್ಕರೆ ಕಾರ್ಖಾನೆಗಳು ಕಾರ್ಯ ನಿರ್ವಹಿಸುತ್ತಿರುವುದರಿಂದ (ಮುಧೋಳ ಹಾಗೂ ಜಮಖಂಡಿ ತಾಲ್ಲೂಕಿನಲ್ಲಿ) ಈ ರಸ್ತೆಯನ್ನು ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಕಂಪ್ಲಿ ಸಹಕಾರ ಸಕ್ಕರೆ ಕಾರ್ಖಾನೆಯ ಜಮೀನು ಮತ್ತು ಆಸ್ತಿಗಳ ಅಕ್ರಮ ಮಾರಾಟ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೧೪ (೩೧೧೦) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸುಂದರಿ ಶುಗರ್ಸ್, ಹೈದರಾಬಾದ್, ಇವರು ಕಂಪ್ಲಿ ಸಹಕಾರ ಸಕ್ಕರೆ ಕಾರ್ಖಾನೆಯ ೧೭೬.೫೧ ಎಕರೆ ಜಮೀನು ಮತ್ತು ಆಸ್ತಿಗಳನ್ನು ಮಾರಾಟ ಮಾಡಲು ಪ್ರಯತ್ನಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮಾರಾಟ ತಡೆಯಲು ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಇ) ಕಂಪ್ಲಿ ಸಹಕಾರ ಸಕ್ಕರೆ ಕಾರ್ಖಾನೆಯನ್ನು ಸುಂದರಿ ಶುಗರ್ಸ್ ಹೈದರಾಬಾದ್, ಇವರಿಗೆ ಮಾರಾಟ ಮಾಡಿದಾಗ ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಖರೀದಿದಾರರು ಕಾರ್ಖಾನೆ ಜಮೀನು ಮತ್ತು ಆಸ್ತಿಗಳನ್ನು ಮಾರಾಟ ಮಾಡದೇ, ಕಾರ್ಖಾನೆಯನ್ನು ಹಾಲಿ ಸ್ಥಳದಲ್ಲಿಯೇ ನಡೆಸಬೇಕೆಂಬ ನಿಬಂಧನೆ ಇದೆಯೇ ; ಇದನ್ನು ಪಾಲಿಸಲಾಗಿದೆಯೇ ;

(ಈ) ೧೯೯೯ರಲ್ಲಿ ಕಂಪ್ಲಿ ಸಹಕಾರ ಸಕ್ಕರೆ ಕಾರ್ಖಾನೆಯನ್ನು ಸುಂದರಿ ಶುಗರ್ಸ್ ಹೈದ್ರಾಬಾದ್ ಇವರಿಗೆ ಮಾರಾಟ ಮಾಡಿದಾಗ ಸರ್ಕಾರದ ಪತ್ರ ದಿನಾಂಕ ೦೨.೦೩.೧೯೯೬ ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ/೪೮/ಇಲ್‌ಆರ್‌ಎಂ/೯೯, ದಿನಾಂಕ: ೧೦.೧೧.೨೦೦೨ರ ಷರತ್ತುಗಳನ್ನು ಪಾಲಿಸದೆ ಉಲ್ಲಂಘನೆ ಮಾಡಿರುವುದು ಸರಿಯೇ ;

(ಉ) ಸುಂದರಿ ಶುಗರ್ಸ್‌ರವರು ಸಕ್ಕರೆ ಕಾರ್ಖಾನೆಯನ್ನು ಖರೀದಿ ಮಾಡುವ ಸಂದರ್ಭದಲ್ಲಿ ರೂ. ೫೭,೮೮,೫೦೦.೦೦ಗಳ ಸ್ಟಾಂಪ್‌ಡ್ಯೂಟಿ ಕಡಿಮೆ ತುಂಬಿರುವುದು ನಿಜವೇ; ಕಡಿಮೆ ತುಂಬಿದ್ದಲ್ಲಿ ಈ ಹಣವನ್ನು ಖರೀದಿ ನಂತರದ ೦೬ ತಿಂಗಳುಗಳ ಒಳಗಾಗಿ ಸರ್ಕಾರಕ್ಕೆ ತುಂಬಿದ್ದಾರೆಯೇ ; ಇಲ್ಲವಾದಲ್ಲಿ ಖರೀದಿ ಒಡಂಬಡಿಕೆಯನ್ನು ರದ್ದು ಮಾಡಲಾಗಿದೆಯೇ ?

## ಕಲಬುರಗಿಯ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ಸಾಲಗಳ ಕುರಿತು.

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೧೫ (೩೯೯೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿಯ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ಜಿಲ್ಲಾ ಕಛೇರಿ ವ್ಯಾಪ್ತಿಯಲ್ಲಿ ಮಂಜೂರಾಗಿರುವ ಸಾಲಗಳ ಮೊತ್ತವೆಷ್ಟು; ಯಾರು ಯಾರಿಗೆ ಎಷ್ಟು ಎಷ್ಟು ಸಾಲವನ್ನು ಯಾವ ದಿನಾಂಕದಂದು ಮಂಜೂರು ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಈ ಕಛೇರಿಯಲ್ಲಿ ಕಳೆದ ೦೧ ವರ್ಷದಲ್ಲೂ ಯಾವ ಯಾವ ಯೋಜನೆಗಳನ್ನು ಯಾವ ಯಾವ ಫಲಾನುಭವಿಗಳಿಗೆ ಎಷ್ಟು ಮೊತ್ತದ ಯೋಜನೆ ಮಂಜೂರು ಮಾಡಲಾಗಿದೆ ; ಕಾರ್ಯಗತಗೊಳಿಸಲಾಗಿದೆ ? (ಅವರೆಲ್ಲರ ಹೆಸರು ವಿಳಾಸ ಕಾಮಗಾರಿಯ ಸದ್ಯದ ಸ್ಥಿತಿಗತಿ ಮಂಜೂರು ಮಾಡಲು ಅವರಿಂದ ಪಡೆದುಕೊಂಡಿರುವ ಎಲ್ಲಾ ದಾಖಲಾತಿಗಳನ್ನು ಒದಗಿಸುವುದು)

## ಅನಧಿಕೃತ ಪೇಯಿಂಗ್ ಗೆಸ್ಟ್ (ಪಿ.ಜಿ.)ಗಳ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೧೬ (೩೦೮೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪೇಯಿಂಗ್ ಗೆಸ್ಟ್ (ಪಿ.ಜಿ.) ನಡೆಸಲು ಅನುಮತಿ ನೀಡಲು ಅನುಸರಿಸುತ್ತಿರುವ ಮಾರ್ಗದರ್ಶಿ ಸೂತ್ರಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಪಿ.ಜಿ.ಗಳು ಅನುಮತಿ ಪಡೆದುಕೊಂಡಿವೆ ; ( ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಅನಧಿಕೃತ ಪಿ.ಜಿ.ಗಳ ಸಂಖ್ಯೆ ಎಷ್ಟು ; ಇವುಗಳ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಬೆಳೆಗಳಿಗೆ ಬೆಂಬಲ ಬೆಲೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೧೭ (೩೦೮೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬೆಳೆಗಳಿಗೆ ಬೆಂಬಲ ಬೆಲೆ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ಯಾವ ಯಾವ ಬೆಳೆಗಳಿಗೆ ಕಳೆದ ಎರಡು ವರ್ಷಗಳಲ್ಲಿ ಎಷ್ಟೆಷ್ಟು ಬೆಂಬಲ ಬೆಲೆ ಘೋಷಿಸಲಾಗಿದೆ ;

(ಇ) ಬೆಳೆಗಳಿಗೆ ನೀಡಿರುವ / ಬಿಡುಗಡೆ ಮಾಡಿರುವ ಬೆಂಬಲ ಬೆಲೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಆಸ್ತಿ ತೆರಿಗೆ ಹಕ್ಕು ವರ್ಗಾವಣೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೧೮ (೩೮೯೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿ ತೆರಿಗೆ ಹಕ್ಕು ವರ್ಗಾಯಿಸಲು ಅನುಸರಿಸುತ್ತಿರುವ ಮಾನದಂಡಗಳೇನು ;

(ಆ) ರಾಜ್ಯದಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿ ತೆರಿಗೆ ಹಕ್ಕು ವರ್ಗಾಯಿಸಲು ಬಾಕಿ ಇರುವ ಪ್ರಕರಣಗಳೆಷ್ಟು ; (ಕಳೆದ ಒಂದು ವರ್ಷದಿಂದ ೯ ತಿಂಗಳು ಮೇಲ್ಪಟ್ಟು, ೬ ತಿಂಗಳು ಮೇಲ್ಪಟ್ಟು ಮತ್ತು ೩ ತಿಂಗಳು ಮೇಲ್ಪಟ್ಟ ವಿವರ ನೀಡುವುದು)

(ಇ) ಆಸ್ತಿ ತೆರಿಗೆ ಹಕ್ಕು ವರ್ಗಾವಣೆಯನ್ನು ಕಂದಾಯ ಇಲಾಖೆಯಂತೆ ಗಣಕೀಕೃತ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಎಂದಿನಿಂದ ಜಾರಿಗೆ ತರಲಾಗುವುದು ?

## ಸ್ಥಳೀಯ ಸಂಸ್ಥೆಗಳ ನೌಕರರಿಗೆ ತುಟ್ಟಿಭತ್ಯೆ.

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೧೯ (೩೦೮೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರದ ಸ್ಥಳೀಯ ಸಂಸ್ಥೆ ನೌಕರರಿಗೆ ತುಟ್ಟಿಭತ್ಯೆ (DA) ಯನ್ನು ಮಂಜೂರು ಮಾಡುವ ಸಂದರ್ಭದಲ್ಲಿ ಪ್ರತ್ಯೇಕ ಆದೇಶದ ಮೂಲಕ ಮಂಜೂರು ಮಾಡಲಾಗುತ್ತಿದೆಯೇ ;

(ಆ) ಸರ್ಕಾರವು ತುಟ್ಟಿಭತ್ಯೆ ನೀಡುವಾಗ ಎಲ್ಲಾ ನೌಕರರಿಗೂ ನೀಡುವಂತೆ ಒಂದೇ ಆದೇಶದಲ್ಲಿ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಈ ಸಂಬಂಧ ಸರ್ಕಾರದ ಆದೇಶಗಳೇನಾದರೂ ಇದೆಯೇ ? (ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯ ಕಾರ್ಯಕ್ರಮಗಳು.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೨೦ (೩೦೮೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತೋಟಗಾರಿಕೆ ಮಿಷನ್ ಯೋಜನೆಯಡಿ ಯಾವ ಯಾವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ ;

(ಆ) ಕಳೆದ ೨ ವರ್ಷಗಳಲ್ಲಿ ತೋಟಗಾರಿಕೆ ಮಿಷನ್ ಯೋಜನೆಯಡಿ ಬಿಡುಗಡೆಯಾದ ಮತ್ತು ಖರ್ಚಾದ ಅನುದಾನ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ತೋಟಗಾರಿಕಾ ಬೆಳೆ ವಿಮೆ ಯಾವ ಯಾವ ಹಣ್ಣು ತರಕಾರಿಗಳಿಗೆ ನೀಡಲಾಗುತ್ತಿದೆ ;

(ಈ) ಇನ್ನೂ ಹೆಚ್ಚಿನ ಬೆಳೆಗಳಿಗೆ ಬೆಳೆ ವಿಮೆ ವಿಸ್ತರಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಉ) ಕಳೆದ ೨ ವರ್ಷಗಳಲ್ಲಿ ವಿತರಿಸಿದ ಬೆಳೆ ವಿಮೆ ಪರಿಹಾರ ಮೊತ್ತವೆಷ್ಟು ? (ಬೆಳೆವಾರು, ಜಿಲ್ಲಾವಾರು ವಿವರ ನೀಡುವುದು)

# ದೊಡ್ಡ ಪಂಚಾಯಿತಿಗಳನ್ನು ಪಟ್ಟಣ ಪಂಚಾಯತ್‌ಗಳನ್ನಾಗಿ ಮೇಲ್ದರ್ಜೆಗೇರಿಸುವುದು.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೨೧ (೩೦೮೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ದೊಡ್ಡ ದೊಡ್ಡ ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತ್‌ಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಯಾವ ಯಾವ ಗ್ರಾಮ ಪಂಚಾಯತ್‌ಗಳಿಂದ ಮೇಲ್ದರ್ಜೆಗೇರಿಸುವ ಬಗ್ಗೆ ಪ್ರಸ್ತಾವನೆ ಸ್ವೀಕೃತವಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಜ್ಯದ ಯಾವ ಪಟ್ಟಣ ಪಂಚಾಯತ್, ಪುರಸಭೆ ಮತ್ತು ನಗರಸಭೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಸ್ಥಳೀಯ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳು ಯಾವುವು ;

(ಉ) ದೊಡ್ಡ ಗ್ರಾಮ ಪಂಚಾಯತ್‌ಗಳೂ ಸೇರಿದಂತೆ ಬೆಳವಣಿಗೆ ಹೊಂದುತ್ತಿರುವ ನಗರ ಸ್ಥಳೀಯ ಸಂಸ್ಥೆಗಳನ್ನು ಶೀಘ್ರವಾಗಿ ಮೇಲ್ದರ್ಜೆಗೇರಿಸುವ ಸಂಬಂಧ ಸರ್ಕಾರ ಯಾವಾಗ ಯಾವ ಕ್ರಮ ಕೈಗೊಳ್ಳಲಿದೆ ?

## ಲೋಕೋಪಯೋಗಿ ಇಲಾಖೆಯ ಕಾಮಗಾರಿಗಳು.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೨೨ (೩೦೮೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷದಲ್ಲಿ ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯಿಂದ ಯಾವ ಯಾವ ಯೋಜನೆಯಡಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ಯೋಜನಾವಾರು, ಲೆಕ್ಕಶೀರ್ಷಿಕೆವಾರು, ಮೊತ್ತವಾರು ವಿಧಾನಸಭಾ ಕ್ಷೇತ್ರವಾರು ಪೂರ್ಣ ವಿವರ ನೀಡುವುದು)

(ಆ) ಈವರೆಗೆ ಕೈಗೆತ್ತಿಕೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಕೈಗೆತ್ತಿಕೊಳ್ಳಬೇಕಾದ ಕಾಮಗಾರಿಗಳ ಸಂಖ್ಯೆ ಎಷ್ಟು ; (ಕಾಮಗಾರಿಯ ಪ್ರಗತಿವಾರು, ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಇ) ಬಿಡುಗಡೆಯಾದ ಕಾಮಗಾರಿಗಳಿಗೆ ಪೂರ್ಣ ಅನುದಾನ ನೀಡಲಾಗಿದೆಯೇ ;

(ಈ) ಬಿಡುಗಡೆ ಮಾಡದಿದ್ದಲ್ಲಿ ಕಾರಣವೇನು ? (ವಿವರ ನೀಡುವುದು)

## ಬಬ್ಬು ಕುದ್ರುವಿನಲ್ಲಿ ತೂಗು ಸೇತುವೆ ನಿರ್ಮಾಣ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೨೩ (೩೦೮೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ "ಬಬ್ಬು ಕುದ್ರು" ವಿನಲ್ಲಿ ತೂಗು ಸೇತುವೆ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿರುವುದು ನಿಜವೇ ;

(ಆ) ಹೌದಾದಲ್ಲಿ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಇ) ಕುಂದಾಪುರ–ಬಬ್ಬುಕುದ್ರು ತೂಗು ಸೇತುವೆ ನಿರ್ಮಾಣ ಕಾರ್ಯ ಯಾವಾಗ ಪ್ರಾರಂಭಿಸಲಾಗುವುದು ;

(ಈ) ಕುಂದಾಪುರ–ಬಬ್ಬುಕುದ್ರು ತೂಗು ಸೇತುವೆ ನಿರ್ಮಾಣದ ಸಮೀಕ್ಷಾ ವರದಿ ಸಿದ್ಧಪಡಿಸಲಾಗಿದೆಯೇ ; ಹೌದಾದಲ್ಲಿ ಸಂಪೂರ್ಣ ಮಾಹಿತಿ ನೀಡುವುದು ;

(ಉ) ಕುಂದಾಪುರ–ಬಬ್ಬುಕುದ್ರು ತೂಗುಸೇತುವೆ ನಿರ್ಮಾಣಕ್ಕಾಗಿ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ರಾಮನಗರ ಜಿಲ್ಲೆ ಮಾಗಡಿ ತಾಲ್ಲೂಕು ಲೋಕೋಪಯೋಗಿ ಇಲಾಖೆ ಹಗರಣ ಬಗ್ಗೆ.

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೨೪ (೩೦೮೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ಲೋಕೋಪಯೋಗಿ ಇಲಾಖೆಯಲ್ಲಿ ನಡೆದಿರುವ ಅಧಿಕಾರ ದುರುಪಯೋಗ ಅವ್ಯವಹಾರ ಮತ್ತು ಆರ್ಥಿಕ ದುರುಪಯೋಗ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಪ್ರಕರಣಗಳಲ್ಲಿ ಭಾಗಿಯಾದ ಅಧಿಕಾರಿ/ನೌಕರರಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ೨೦೧೧-೧೨ನೇ ಸಾಲಿನಲ್ಲಿ ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕಿನ ಲೋಕೋಪಯೋಗಿ ಇಲಾಖೆಯಲ್ಲಿ ಕೊಟ್ಯಾಂತರ ರೂಗಳ ಭ್ರಷ್ಟಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಈ) ಹಾಗಿದ್ದಲ್ಲಿ, ಯಾವ ಪ್ರಮಾಣದಲ್ಲಿ ಭ್ರಷ್ಟಚಾರ ನಡೆದಿದೆ; ಸದರಿ ಭಷ್ಟಚಾರದಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರು ಯಾರು ; ಅವರುಗಳ ವಿರುದ್ಧ ಸರ್ಕಾರ ಕೈಗೊಂಡ ಶಿಸ್ತಿನ ಕ್ರಮಗಳೇನು ;

(ಉ) ಸದರಿ ಭಷ್ಟಾಚಾರದಲ್ಲಿ ಪಾಲ್ಗೊಂಡ ಅಧಿಕಾರಿ/ನೌಕರರಿಗೆ ಸರ್ಕಾರ ಉನ್ನತ ಮಟ್ಟದ ಹುದ್ದೆಗಳಿಗೆ ಮುಂಬಡ್ತಿ ನೀಡಿರುವುದು ನಿಜವೇ ? (ಸಂಪೂರ್ಣ ವಿವರ ನೀಡುವುದು)

## ಅಲ್ಪಸಂಖ್ಯಾತರ ಅಭಿವೃದ್ಧಿಯ ವಿವಿಧ ಯೋಜನೆಗಳು

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೨೫ (೩೧೦೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:-

ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಕೈಗೊಳ್ಳಲಾಗುತ್ತಿರುವ ವಿವಿಧ ಯೋಜನೆ ಮತ್ತು ಕಾರ್ಯಕ್ರಮಗಳು ಯಾವುವು ? (ವಿವರ ನೀಡುವುದು ಹಾಗೂ ೨೦೧೨-೧೩ ರಿಂದ ೨೦೧೪-೧೫ರವರೆಗೆ ವಿವಿಧ ಯೋಜನೆಗೆ ಸರ್ಕಾರ ನೀಡಿರುವ ಅನುದಾನದ ಹಾಗೂ ಬಳಕೆಯಾಗದೆ ಉಳಿದಿರುವ ಅನುದಾನದ ವಿವರ ನೀಡುವುದು)

## ಬಿದಾಯಿ ಯೋಜನೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೨೬ (೩೧೦೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಸಮುದಾಯಗಳಿಗೆ ಜಾರಿಗೊಳಿಸಿರುವ ಬಿದಾಯಿ ಯೋಜನೆಗಳ ಮಾನದಂಡಗಳೇನು ;

(ಆ) ಸರ್ಕಾರದ ೨೦೧೪–೧೫ನೇ ಸಾಲಿನಲ್ಲಿ ನೀಡಿರುವ ಅನುದಾನ ಎಷ್ಟು ;

(ಇ) ಎಷ್ಟು ಫಲಾನುಭವಿಗಳಿಗೆ ಸಹಾಯದನ ವಿತರಿಸಲಾಗಿದೆ ; (ಬಾಕಿ ಇರುವ ಅರ್ಜಿಗಳ ವಿವರ ಜಿಲ್ಲಾವಾರು ನೀಡುವುದು)

(ಈ) ಈ ಯೋಜನೆಯಡಿ ಅನುದಾನ ಹೆಚ್ಚಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಮುನಿಸಿಪಾಲಿಟಿಗಳ ಅನುದಾನ.

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೨೭ (೩೧೦೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಜಾರಿಯಲ್ಲಿರುವ ಶೇಕಡ ೭.೨೫ರಡಿ ವಿವಿಧ ಮುನಿಸಿಪಾಲಿಟಿಗಳು ಕಳೆ ೩ ವರ್ಷಗಳಲ್ಲಿ ನಿಗಧಿ ಮಾಡಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಸದರಿ ಅನುದಾನ ಬಳಸಲು ಇರುವ ಮಾನದಂಡಗಳೇನು ? (ಸದರಿ ಅನುದಾನದಲ್ಲಿ ಅಲ್ಪಸಂಖ್ಯಾತರ ಸಮುದಾಯಗಳಿಗೆ ನೀಡಿರುವ ಸೌಲಭ್ಯದ ವಿವರ ವರ್ಷವಾರು ನೀಡುವುದು)

## ಕೃಷಿ ಯಂತ್ರೋಪಕರಣಗಳ ವಿತರಣೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೨೮ (೩೧೦೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರದಿಂದ ರೈತರಿಗೆ ಯಾವ ಯಾವ ಕೃಷಿ ಸಲಕರಣೆಗಳನ್ನು ವಿತರಿಸಲಾಗಿದೆ ; (ಅವುಗಳ ವಿವರಣೆ ನೀಡುವುದು)

(ಆ) ಫಲಾನುಭವಿಗಳನ್ನು ಆಯ್ಕೆ ಮಾಡುವಲ್ಲಿ ಕೈಗೊಳ್ಳುವ ಮಾನದಂಡಗಳೇನು ; ಸರ್ಕಾರವು ರಾಜ್ಯದ ಎಲ್ಲ ರೈತರಿಗೆ ಕೃಷಿ ಯಂತ್ರೋಪಕರಣಗಳನ್ನು ವಿತರಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಈ ಯೋಜನೆಯಡಿ ಎಷ್ಟು ಫಲಾನುಭವಿಗಳಿಗೆ ಕೃಷಿ ಯಂತ್ರೋಪಕರಣಗಳನ್ನು ವಿತರಿಸಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಬೆಳಗಾವಿ ಜಿಲ್ಲೆಯ ಹಾಪ್‌ಕಾಮ್ಸ್‌ಗಳು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೨೯ (೩೧೦೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ್ಯಾಂತ ಎಷ್ಟು ಹಾಪ್‌ಕಾಮ್ಸ್‌ಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಹಾಪ್‌ಕಾಮ್ಸ್‌ಗಳನ್ನು ಸ್ಥಾಪಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈಗಾಗಲೇ ತೋಟಗಾರಿಕೆ ಉತ್ಪನ್ನಗಳ ಮಾರುಕಟ್ಟೆ ಫೆಡರೇಷನ್ (KHF) ಮುಖಾಂತರ ವಿಶೇಷ ಮಾರಾಟ ಕಾರ್ಯಕ್ರಮಗಳನ್ನು ರೂಪಿಸಲಾಗಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಗ್ರಾಹಕ ಮಾರಾಟ ಅಂಗಳಗಳ ಸ್ಥಾಪನೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೩೦ (೩೧೦೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರೈತರಿಗೆ ಅನುಕೂಲವಾಗಲು "ಗ್ರಾಹಕ ಮಾರಾಟ ಅಂಗಳ" ಸ್ಥಾಪಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಯಾವ ಕಾಲಮಿತಿಯಲ್ಲಿ ಗ್ರಾಹಕ ಮಾರಾಟ ಅಂಗಳ ಸ್ಥಾಪಿಸಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಈ) ಬೆಳಗಾವಿ ಜಿಲ್ಲೆಯಲ್ಲಿ ೨೦೧೪-೧೫ನೇ ಸಾಲಿನಲ್ಲಿ ನಿರ್ಮಿಸಲಾದ "ಗ್ರಾಹಕ ಮಾರಾಟ ಅಂಗಳ"ಗಳು ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

# ರೈತರಿಗೆ ಮೊಬೈಲ್ ಸಂದೇಶಗಳು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೩೧ (೩೧೦೫) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೊಬೈಲ್ ಸಂದೇಶಗಳ ಮೂಲಕ ಹವಾಮಾನ, ಬೇಸಾಯ ಕ್ರಮಗಳು, ಮಾರುಕಟ್ಟೆ ಬೆಲೆಗಳು ಇತ್ಯಾದಿ ವಿವರಗಳನ್ನು ನೋಂದಾಯಿತ ರೈತರುಗಳಿಗೆ ನೇರವಾಗಿ ಅವರ ಮೊಬೈಲ್/ ಗಣಕಯಂತ್ರ ಮತ್ತು ಮಾಹಿತಿ ಕಿಯೋಸ್ಕ್‌ಗಳಿಗೆ ನಿರಂತರವಾಗಿ ಮಾಹಿತಿಯನ್ನು ಸಕಾಲದಲ್ಲಿ ಒದಗಿಸಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ರೈತರಿಗೆ ಈ ಸೌಲಭ್ಯ ಕಲ್ಪಿಸಲಾಗಿದೆ ; ಎಷ್ಟು ರೈತರು ನೋಂದಾಯಿತರಾಗಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಯೋಜನೆಗಾಗಿ ಸರ್ಕಾರವು ಬೆಳಗಾವಿ ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆ ಮಾಡಿದೆ ; ಅನುದಾನ ಸಂಪೂರ್ಣವಾಗಿ ಬಳಕೆಯಾಗಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಗ್ರಾಮೀಣ ಭಾಗದಲ್ಲಿರುವ ಕೃಷಿ ಸೇವಾ ಕೇಂದ್ರಗಳಲ್ಲಿ ಈ ಕುರಿತು ರೈತರಿಗೆ ಮಾಹಿತಿ ಸಿಗುವಂತೆ ಮಾಡಲು ಕ್ರಮ ಜರುಗಿಸುವ ವಿಚಾರ ಸರ್ಕಾರದ ಮುಂದಿದೆಯೇ ?

# ಕೃಷಿನಿರತ ರೈತರಿಗೆ ಆಧುನಿಕ ಸೌಲಭ್ಯ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೩೨ (೩೧೧೪)ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ಸಾಲಿನ ಆಯವ್ಯಯದಲ್ಲಿ ಕೃಷಿ ಇಲಾಖೆಗೆ ಒದಗಿಸಲಾದ ಅನುದಾನವೆಷ್ಟು ; ಖರ್ಚು ಮಾಡಲಾದ ಮೊತ್ತವೆಷ್ಟು ; ಖರ್ಚಾಗದೆ ಉಳಿದ ಮೊತ್ತವೆಷ್ಟು ; ಖರ್ಚಾಗದೇ ಇರಲು ಕಾರಣಗಳೇನು ; (ಮಾಹಿತಿ ಒದಗಿಸುವುದು)

(ಆ) ರಾಜ್ಯದ ಕೃಷಿನಿರತ ರೈತರಿಗೆ ಕಳೆದ ಮೂರು ವರ್ಷಗಳಲ್ಲಿ ಕೃಷಿ ಇಲಾಖೆಯಿಂದ ಒದಗಿಸಲಾಗುತ್ತಿರುವ ಕೃಷಿ ಪರಿಕರಗಳು, ಆಧುನಿಕ ಯಂತ್ರೋಪಕರಣಗಳ ಉಪಯೋಗ ಹಾಗೂ ಆಧುನಿಕ ಕೃಷಿ ಪದ್ಧತಿಗಳ ಬಗ್ಗೆ ಪ್ರಾತ್ಯಕ್ಷಿಕೆ ಮತ್ತು ಇನ್ನಿತರೆ ಸೌಲಭ್ಯಗಳೇನು ; (ಜಿಲ್ಲಾವಾರು, ವರ್ಷಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಮೇಲ್ಕಂಡ ಸವಲತ್ತುಗಳನ್ನು ಪಡೆಯಲು ಇರುವ ನಿಯಮಗಳೇನು ; (ಮಾಹಿತಿ ಒದಗಿಸುವುದು)

(ಈ) ಕಳೆದ ಮೂರು ವರ್ಷಗಳಿಂದ ಈವರೆಗೆ ರಾಜ್ಯದ ಎಷ್ಟು ಜನ ರೈತರು ಈ ಸವಲತ್ತುಗಳನ್ನು ಪಡೆದಿರುತ್ತಾರೆ ? (ಕೃಷಿನಿರತ ರೈತರ ವಿಳಾಸ ಸಹಿತ ಜಿಲ್ಲಾವಾರು, ವರ್ಷಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಮದ್ದೂರು ತಾಲ್ಲೂಕಿನಲ್ಲಿ ವಿದ್ಯುತ್ ಸಮಸ್ಯೆ ಹೆಚ್ಚಾಗಿರುವ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೩೩ (೩೧೨೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ವಿವಿಧ ಗ್ರಾ.ಪಂ.ವ್ಯಾಪ್ತಿಯಲ್ಲಿ ವಿದ್ಯುತ್ ಸಮಸ್ಯೆ ತೀವ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸುಧಾರಣೆಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಮದ್ದೂರು ತಾಲ್ಲೂಕಿನಲ್ಲಿ ನಿರಂತರ ಜ್ಯೋತಿ ಯೋಜನೆಯಡಿ ಹೆಚ್ಚುವರಿ ಕಂಬಗಳು ಮತ್ತು ಲೈನ್‌ಗಳ ಅಳವಡಿಕೆ ಕೆಲಸ ಕುಂಠಿತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಕೈಗೊಂಡ ಕ್ರಮಗಳೇನು ; ಪ್ರಸ್ತುತ ಇನ್ನೂ ಕಾಮಗಾರಿ ಪ್ರಾರಂಭಿಸದ ಗ್ರಾಮಗಳೆಷ್ಟು ? (ಸಂಪೂರ್ಣ ವಿವರವಾದ ಮಾಹಿತಿ ನೀಡುವುದು)

## ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಕೈಗೊಂಡ ಯೋಜನೆಗಳ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೩೪ (೩೧೧೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಹೊಸ ಸರ್ಕಾರ ಬಂದಾಗಿನಿಂದ ಇಲ್ಲಿಯವರೆಗೆ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಯೋಜನೆಗಳನ್ನು

ಕೈಗೆತ್ತಿಕೊಳ್ಳಲಾಗಿದೆಯೇ ; ಕೈಗೊಂಡಿದ್ದಲ್ಲಿ, ಎಷ್ಟು ಯೋಜನೆಗಳನ್ನು ಕೈಗೊಳ್ಳಲಾಗಿದೆ ; (ಯೋಜನಾವಾರು, ಜಿಲ್ಲಾವಾರು ಫಲಾನುಭವಿಗಳ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಿಂದೀಚೆಗೆ ಎಷ್ಟು ಯೋಜನೆಗಳಿಗೆ ಹಣ ಬಿಡುಗಡೆ ಮಾಡಲಾಗಿದೆ ; ಮಾಡಿದ್ದಲ್ಲಿ ಬಿಡುಗಡೆ ಮಾಡಲಾದ ಒಟ್ಟು ಹಣವೆಷ್ಟು ; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಇ) ನಮ್ಮ ರಾಜ್ಯದಲ್ಲಿರುವ ಎಷ್ಟು ಧರ್ಮ (ಜಾತಿ ಮತ್ತು ಉಪ ಜಾತಿ) ಗಳಿಗೆ ಅಲ್ಪಸಂಖ್ಯಾತರೆಂದು ಘೋಷಿಸಲಾಗಿದೆ ; ಜಿಲ್ಲಾವಾರು ಅಲ್ಪಸಂಖ್ಯಾತರ ಸಂಖ್ಯೆಯ (ವಿವಿಧ ಜನಾಂಗದ) ವಿವರ ನೀಡುವುದು ; ಈ ಅಲ್ಪಸಂಖ್ಯಾತರಿಗೆ ಸರ್ಕಾರದಿಂದ ನೀಡಲಾದ ಹಾಗೂ ನೀಡಲಾಗುವ ಸೌಲಭ್ಯಗಳೇನು ? (ವಿವರ ನೀಡುವುದು)

## ಲೋಕೋಪಯೋಗಿ ಯೋಜನೆಗಳಲ್ಲಿ ಭ್ರಷ್ಟಾಚಾರದ ಪ್ರಕರಣಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೩೫ (೩೧೨೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವ ಯಾವ ಲೋಕೋಪಯೋಗಿ ವಿಭಾಗ ಮತ್ತು ಉಪವಿಭಾಗಗಳಲ್ಲಿ ಯೋಜನೆಗಳ ಅನುಷ್ಠಾನದಲ್ಲಿ ಭ್ರಷ್ಟಾಚಾರ ಮತ್ತು ಹಣ ದುರುಪಯೋಗದ ಪ್ರಕರಣಗಳು ಪತ್ತೆಯಾಗಿವೆಯೇ;

(ಆ) ಇಂತಹ ಪ್ರಕರಣಗಳ ಸಂಖ್ಯೆ ಎಷ್ಟು; (ವಿವರ ನೀಡುವುದು); ಈ ಪ್ರತಿ ಪ್ರಕರಣಗಳಲ್ಲಿ ದುರುಪಯೋಗವಾಗಿರುವ ಹಣದ ಮೊತ್ತವೆಷ್ಟು;

(ಇ) ಈ ಹಣ ದುರುಪಯೋಗದ ಬಗ್ಗೆ ಯಾವ ಯಾವ ಸಮಿತಿಗಳು ಸರ್ಕಾರಕ್ಕೆ ವರದಿಗಳನ್ನು ಸಲ್ಲಿಸಿವೆ; ಈ ವರದಿಯ ಮುಖ್ಯಾಂಶಗಳೇನು; (ವಿವರ ಒದಗಿಸುವುದು)

(ಈ) ಈ ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವವರ ಹೆಸರು, ವಿವರಗಳನ್ನು ಮತ್ತು ಇದರಿಂದ ಸರ್ಕಾರದ ಬೊಕ್ಕಸಕ್ಕೆ ಆಗಿರುವ ನಷ್ಟದ ಮಾಹಿತಿಯನ್ನು ಒದಗಿಸುವುದು ;

(ಉ) ಸರ್ಕಾರವು ತಪ್ಪಿತಸ್ಥರ ವಿರುದ್ಧ ಕೈಗೊಂಡಿರುವ ಕ್ರಮಗಳು ಯಾವುವು ; ಹಾಗೆ, ಇಂತಹ ಅಧಿಕಾರಿಗಳಿಗೆ ಮುಂಬಡ್ತಿ ನೀಡುವುದನ್ನು ತಡೆಹಿಡಿಯಬಾರದೇಕೆ ; ಭ್ರಷ್ಟ ಅಧಿಕಾರಿಗಳು ಒಂದೇ ಸ್ಥಳದಲ್ಲಿ ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ ? (ಮಾಹಿತಿ ನೀಡುವುದು)

## ರೈತರ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭೩೬ (೩೧೨೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರೈತರ ಪಂಪ್‌ಸೆಟ್‌ಗಳಿಗೆ ಪ್ರತ್ಯೇಕ ಮೀಟರ್ ಅಳವಡಿಸಲು ಹಾಗೂ ಕೃಷಿ ಮತ್ತು ಕೈಗಾರಿಕೆಗೆ ಪ್ರತ್ಯೇಕ ವಿದ್ಯುತ್ ವಿತರಣಾ ಜಾಲ ಅಳವಡಿಸಲು ಸರ್ಕಾರ ಮುಂದಾಗಿದೆಯೋ ; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಹಾಲಿ ಇರುವ ಪಂಪ್‌ಸೆಟ್‌ಗಳ ಒಟ್ಟು ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು); ಇದರಲ್ಲಿ ನಿಜವಾದ ರೈತರ ಪಂಪ್‌ಸೆಟ್‌ಗಳನ್ನು ಗುರುತಿಸಲು ಇರುವ ಮಾನದಂಡಗಳೇನು ; ರೈತರ ಹೆಸರಲ್ಲಿ ನಡೆಯುವ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ಹಮ್ಮಿಕೊಂಡಿರುವ ಕ್ರಮಗಳೇನು ;

(ಇ) ಕೃಷಿ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸಲು ಸರ್ಕಾರಕ್ಕೆ ತಗಲುವ ವೆಚ್ಚ ಎಷ್ಟು ; ಇದಕ್ಕಾಗಿ ಎಷ್ಟು ಮೀಟರ್‌ಗಳನ್ನು ಖರೀದಿಸಲಾಗುವುದು ; ಯಾವ ಮಾನದಂಡದಲ್ಲಿ ಇದನ್ನು ರೈತರ ಪಂಪ್‌ಸೆಟ್‌ಗೆ ಅಳವಡಿಸಲಾಗುತ್ತದೆ ;

(ಈ) ಈ ನಿಟ್ಟಿನಲ್ಲಿ ನೈಸರ್ಗಿಕ ವಿದ್ಯುತ್ ಉತ್ಪಾದನೆಗೆ ಆದ್ಯತೆಗೆ ಸರ್ಕಾರ ಮುಂದಾಗಿದೆಯೇ; ಇದಕ್ಕೆ ರೂಪಿಸಿರುವ ಯೋಜನೆಗಳು ಯಾವುವು ; ಇದನ್ನು ಯಾವ ರೀತಿ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತದೆ ?

## ಪೌರ ಕಾರ್ಮಿಕರಿಗೆ ನಿವೇಶನ ಒದಗಿಸುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೩೭(೩೧೨೩)ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ನಗರ ಸಭೆಯಲ್ಲಿ ೧೯೮೩ ರಿಂದ ಪೌರ ಕಾರ್ಮಿಕರಾಗಿ ಸೇವೆ ಸಲ್ಲಿಸುತ್ತಿರುವವರನ್ನು ಕೆಲಸದಿಂದ ಕೈಬಿಡಲು ಕಾರಣವೇನು ; ಇವರ ಸೇವೆಯನ್ನು ಸಕ್ರಮಗೊಳಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ಹಾಸನ ನಗರದಲ್ಲಿ ವಾಸಿಸುತ್ತಿರುವ ಪೌರಕಾರ್ಮಿಕರು ನಿವೇಶನವಿಲ್ಲದೆ ಹೀನಾಯ ಸ್ಥಿತಿಯಲ್ಲಿ ಬದುಕುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಪೌರ ಕಾರ್ಮಿಕರಿಗೆ ನಿವೇಶನ ಹಕ್ಕು ಪತ್ರ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹೆಗ್ಗಡದೇವನಕೋಟೆ ಸಂತೆ ಮೈದಾನದ ಅಭಿವೃದ್ಧಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ;–**

೨೭೩೮(೩೧೨೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೆಗ್ಗಡದೇವನಕೋಟೆ ಪಟ್ಟಣದಲ್ಲಿ ಹುಣಸೂರು ಬೇಗೂರು ರಸ್ತೆಯಲ್ಲಿ ಎಸ್.ಬಿ.ಎಂ. ಮುಂದೆ ವಿಶಾಲ ಸಂತೇ ಮೈದಾನ ಇದ್ದರೂ ಇಲ್ಲಿನ ಅವ್ಯವಸ್ಥೆಯಿಂದ ಜನರು ಮುಖ್ಯ ರಸ್ತೆಯಲ್ಲಿಯೇ ಸಂತೆಸೇರಿ ವ್ಯಾಪಾರ ಮಾಡುತ್ತಿರುವುದು ಗಮನಕ್ಕೆ ಬಂದಿದೆಯೇ ;

(ಆ) ಈ ಸಂತೆ ಮೈದಾನವನ್ನು ಎ.ಪಿ.ಎಂ.ಸಿ ವಶಕ್ಕೆ ತೆಗೆದುಕೊಂಡು ವ್ಯವಸ್ಥಿತವಾಗಿ ಅಭಿವೃದ್ಧಿಪಡಿಸಿ, ಮಾರಾಟದ ಮುಂಗಟ್ಟೆಗಳನ್ನು ನಿರ್ಮಿಸಿ ಕುಡಿಯುವ ನೀರು, ಶೌಚಾಲಯ, ನೆರಳಿನ ವ್ಯವಸ್ಥೆ ಮಾಡಿ ಕೊಟ್ಟು, ಸಂತೆ ನಡೆಸಲು ರೈತಾಪಿ ಜನಗಳಿಗೆ ಮತ್ತು ನಗರೀಕರಿಗೆ ಅನುಕೂಲ ಮಾಡಿಕೊಡಲಾಗುವುದೇ ?

# ಬೆಂಗಳೂರು–ದಿಂಡಿಗಲ್ ರಾಷ್ಟ್ರೀಯ ಹೆದ್ದಾರಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೩೯(೩೧೨೫)ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು–ದಿಂಡಿಗಲ್ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿ ಎಂದು ಯಾವಾಗ ಘೋಷಣೆ ಮಾಡಲಾಯಿತು ; ಕರ್ನಾಟಕ ರಾಜ್ಯದೊಳಗಿನ ಈ ಹೆದ್ದಾರಿಯ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಮಂಜೂರು ಮಾಡಿ ಬಿಡುಗಡೆ ಮಾಡಿರುವ ಹಣ ಎಷ್ಟು ; ಯಾವ ಯಾವ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ ;

(ಆ) ಈ ಹೆದ್ದಾರಿಯನ್ನು ವಿಸ್ತರಿಸಿ, ಚತುಷ್ಪಥ ಹೆದ್ದಾರಿಯನ್ನಾಗಿ ನಿರ್ಮಿಸುವ ಕಾಮಗಾರಿಯು ಇನ್ನೂ ಆರಂಭವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಕಾರಣಗಳೇನು ;

(ಇ) ಈ ಹೆದ್ದಾರಿಯ ಅಗಲೀಕರಣಕ್ಕೆ ಅಗತ್ಯವಾದ ಭೂಮಿಯ ಸ್ವಾಧೀನ, ಕೇಂದ್ರ ಸರ್ಕಾರದ ಹೆದ್ದಾರಿ ಪ್ರಾಧಿಕಾರದಿಂದ ಅಗತ್ಯವಾದ ಹಣ ಬಿಡುಗಡೆ, ಕಾಮಗಾರಿ ಆರಂಭ ಇವುಗಳ ಬಗ್ಗೆ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ಬಗ್ಗೆ ಕೇಂದ್ರದ ಮೇಲೆ ಒತ್ತಡ ತರುವ ಕಾರ್ಯ ಆಗಿದೆಯೋ ? (ವಿವರ ಒದಗಿಸುವುದು)

## ಹನೂರು–ಮಹದೇಶ್ವರ ಬೆಟ್ಟ ರಸ್ತೆಯಲ್ಲಿ ತಟ್ಟೆಹಳ್ಳಿ ಸೇತುವೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೪೦ (೩೧೨೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹನೂರು–ಮಹದೇಶ್ವರ ಬೆಟ್ಟ ರಾಜ್ಯ ಹೆದ್ದಾರಿಯಲ್ಲಿ ಬರುವ ತಟ್ಟೆಹಳ್ಳ ಸೇತುವೆಯು ಶಿಥಿಲಗೊಂಡು ಅಪಾಯಕಾರಿ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಅಭಿವೃದ್ಧಿಪಡಿಸಲು ಅಥವಾ ಪುನರ್ ನಿರ್ಮಾಣ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಯಳಂದೂರು–ಕಾರಾಪುರ–ಅಂಬಳೆ ರಸ್ತೆಯ ಎರಡೂ ಬದಿಗೆ ದಟ್ಟವಾದ ಜಾಲಿಪೊದೆ ಬೆಳೆದಿದ್ದು, ವಾಹನ ಸಂಚಾರಕ್ಕೆ ಅಪಾಯಕಾರಿ ಸ್ಥಿತಿ ಇರುವುದರಿಂದ ಈ ಜಾಲಿಪೊದೆಗಳನ್ನು ನಿರ್ಮೂಲನೆ ಮಾಡಲು ಕ್ರಮ ಜರುಗಿಸಲಾಗುವುದೇ ?

## ಪ್ಲಾಸ್ಟಿಕ್ ಮುಕ್ತ ಪುರಸಭೆಗಳು.

**ಶ್ರೀ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) ;–**

೨೭೪೧ (೩೦೯೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪುರಸಭೆಗಳಲ್ಲಿ ಪ್ಲಾಸ್ಟಿಕ್ ಮುಕ್ತ ಪುರಸಭೆಗಳಾವುವು ;

(ಆ) ಎಲ್ಲಾ ಪುರಸಭೆಗಳನ್ನು ಪ್ಲಾಸ್ಟಿಕ್ ಮುಕ್ತ ಪುರಸಭೆಗಳನ್ನಾಗಿ ಮಾಡಲು ಇರುವ ತೊಂದರೆಗಳೇನು ;

(ಇ) ಪ್ಲಾಸ್ಟಿಕ್ ನಿಷೇಧವನ್ನು ಕಡ್ಡಾಯವಾಗಿ ಹಾಗೂ ಧನಾತ್ಮಕವಾಗಿ ಕಾರ್ಯರೂಪಕ್ಕೆ ತಂದಿರುವ ಪುರಸಭೆಗಳಿಗೆ ಸರ್ಕಾರ ನೀಡುವ ಉತ್ತೇಜನಗಳಾವುವು ?

## ಕೃಷಿ ಉಪಕರಣಗಳ ಖರೀದಿಗೆ ಸಹಾಯ ಧನ.

**ಶ್ರೀ ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) ;–**

೨೭೪೨ (೩೦೯೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಉಪಕರಣಗಳನ್ನು ಖರೀದಿಸಲು ರೈತರಿಗೆ ಕಳೆದ ೨ ವರ್ಷಗಳಿಂದ ನೀಡಲಾಗಿರುವ ಸಹಾಯಧನವೆಷ್ಟು ;

(ಆ) ಯಾವ ಯಾವ ವಸ್ತುಗಳನ್ನು ಖರೀದಿಸಲು ಸಹಾಯಧನವನ್ನು ನೀಡಲಾಗುತ್ತದೆ ;

(ಇ) ಸಹಾಯಧನವನ್ನು ಮಂಜೂರು ಮಾಡಲು ಅನುಸರಿಸಲಾಗುವ ಮಾನದಂಡಗಳೇನು ?

## ಕೃಷಿ ಬೆಲೆ ಆಯೋಗ ರಚನೆ.

**ಶ್ರೀ ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೭೪೩ (೩೦೯೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) 'ಕೃಷಿ ಬೆಲೆ ಆಯೋಗ' ರಚಿಸಲಾಗಿದೆಯೆ ;

(ಆ) ರಚಿಸಲಾಗಿದ್ದಲ್ಲಿ, ಇದರ ರೂಪುರೇಷುಗಳೇನು ? (ವಿವರಗಳನ್ನು ನೀಡುವುದು)

## ಪರಿಶಿಷ್ಟ ಜಾತಿ/ ಪಂಗಡಗಳ ಕಾಲೋನಿಯ ಮೂಲ ಸೌಕರ್ಯ.

**ಶ್ರೀ ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೭೪೪ (೩೦೯೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಕೋಲಾರ–ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಕಾಲೋನಿಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕೈಗೊಂಡಿರುವ ಕಾಮಗಾರಿಗಳು ಯಾವುವು ;

(ಆ) ಈ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಇ) ಇಲ್ಲಿಯವರೆಗೂ ಎಷ್ಟು ಅನುದಾನವನ್ನು ವ್ಯಯಿಸಲಾಗಿದೆ ; ಹಾಗೂ ಉಳಿದಿರುವ ಅನುದಾನವೆಷ್ಟು ?

## ಶ್ರೀನಿವಾಸಪುರ ಪುರಸಭೆ ಯೋಜನೆಗಳು.

**ಶ್ರೀ ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೭೪೫ (೩೦೯೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯ ಶ್ರೀನಿವಾಸಪುರ ಪುರಸಭೆ ವತಿಯಿಂದ ಕಳೆದ ೩ ವರ್ಷಗಳಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಯಾವ ಯಾವ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ; ಈ ಅವಧಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಆ) ಕಳೆದ ಮೂರು ವರ್ಷಗಳಿಂದ ರಾಜ್ಯ ಮತ್ತು ಕೇಂದ್ರ ಸರ್ಕಾರದ

ಅನುದಾನದಿಂದ ಇದಕ್ಕಾಗಿ ವಿವಿಧ ಬಾಬ್ತುಗಳಲ್ಲಿ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ? (ವಿವರ ನೀಡುವುದು)

## ಕಬ್ಬು ಬೆಳಗಾರರಿಗೆ ಬಾಕಿ ಮೊತ್ತ ಪಾವತಿ.

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :-**

೨೭೪೬ (೩೯೭೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಕ್ಕರೆ ಕಾರ್ಖಾನೆಗಳು, ಕಬ್ಬು ಬೆಳೆಗಾರರಿಗೆ ಬಾಕಿ ಪಾವತಿಸದೆ ಸತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಹಾಗಾದರೆ, ಕಬ್ಬು ಬೆಳೆಗಾರರಿಗೆ ಬಾಕಿ ಪಾವತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ವಿದ್ಯುತ್ ದುರಂತಗಳಿಂದ ಮೃತಪಟ್ಟವರು.

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :-**

೨೭೪೭ (೩೦೮೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿದ್ಯುತ್ ತಂತಿ ಹರಿದು ಬಿದ್ದು, ಮತ್ತು ವಿದ್ಯುತ್ ಸ್ಪರ್ಶದ ದುರಂತಗಳಿಂದ ಸಾವಿಗೀಡಾದ ಸರ್ಕಾರಿ ಸಿಬ್ಬಂದಿಗಳೆಷ್ಟು ; ಜನ ಸಾಮಾನ್ಯರೆಷ್ಟು ; ಅಂಗವಿಕಲರಾದವರೆಷ್ಟು;

(ಆ) ವಿದ್ಯುತ್ ದುರಂತದಿಂದ ಮೃತಪಟ್ಟವರಿಗೆ ಸರ್ಕಾರ ನೀಡುವ ಪರಿಹಾರ ಮೊತ್ತವೆಷ್ಟು ; ಈವರೆಗೆ ಎಷ್ಟು ಮಂದಿಗೆ ಪರಿಹಾರ ನೀಡಲಾಗಿದೆ ;

(ಇ) ವಿದ್ಯುತ್ ಅವಘಡಗಳನ್ನು ತಪ್ಪಿಸಲು, ಸರ್ಕಾರ ತೆಗೆದುಕೊಂಡ ಮುಂಜಾಗ್ರತಾ ಸುಧಾರಿತ ಕ್ರಮಗಳೇನು ?

# ಶಾದಿ ಭಾಗ್ಯ ಯೋಜನೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೭೪೮ (೩೯೪೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿ ಶಾದಿ ಭಾಗ್ಯ ಯೋಜನೆಯಡಿಯಲ್ಲಿ ಯೋಜನೆಯ ಪ್ರಾರಂಭದಿಂದ ಇಲ್ಲಿಯವರೆಗೂ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಇವುಗಳಲ್ಲಿ ತಿರಸ್ಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; ತಿರಸ್ಕಾರಕ್ಕೆ ಕಾರಣವೇನು ;

(ಇ) ಈ ಯೋಜನೆಗೆ ಸರ್ಕಾರ ಮಂಜೂರು ಮಾಡಿದ ಅನುದಾನವೆಷ್ಟು ; (ವಿವರ ನೀಡುವುದು)

(ಈ) ಈ ಯೋಜನೆಯ ಲಾಭವನ್ನು ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಅರ್ಜಿಗಳು ಕ್ರಮಬದ್ಧವಿದ್ದು, ಅನುದಾನದ ಕೊರತೆಯಿಂದ ಫಲಾನುಭವಿಗಳಿಗೆ ಅನುದಾನ ನೀಡದೆ ಇರುವ ಪ್ರಕರಣಗಳೇನಾದರೂ ಇವೆಯೇ ? (ಇದ್ದಲ್ಲಿ, ಪ್ರಕರಣವಾರು ತಾಲ್ಲೂಕುವಾರು ವಿವರ ನೀಡುವುದು)

ವಿ. ಶ್ರೀಶ್

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ-2, ಬೆಂಗಳೂರು-59/ಕಾ.ಸೂ.03528/ 1200 ಪ್ರತಿಗಳು/28-03-15